# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ



**ಸುಭಾಷಿತ:**

ನಿನ್ನ ಮನಸ್ಸು ಶುದ್ಧವಾಗಿದ್ದರೆ
ಜಗತ್ತಿನ ಮಾತುಗಳು ನಿನ್ನನ್ನ ಕದಲಿಸಲಾರವು..
ಕೆಲವರು ನಿನ್ನ ದಾರಿಯನ್ನು
ಅರ್ಥಮಾಡಿಕೊಳ್ಳುವುದಿಲ್ಲ..
ಕೆಲವರು ನಿನ್ನ ಮೌನವನ್ನು ದುರ್ಬಲತೆ
ಎಂದುಕೊಳ್ಳುತ್ತಾರೆ..
ಆದರೆ ನಿನ್ನ ಹೃದಯದಲ್ಲಿ ಸತ್ಯ ಇದ್ದರೆ
ನಿನ್ನ ಹೆಜ್ಜೆಯನ್ನು
ಯಾರೂ ನಿಲ್ಲಿಸಲು ಸಾಧ್ಯ ಇಲ್ಲ..
**ಭಗವಾನ್ ಶ್ರೀಕೃಷ್ಣ**




PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 18-09-2026 to 24-09-2026 ಬೆಲೆ:10-00 ಸಂಪುಟ–1 ಸಂಚಿಕೆ–51 ಪುಟಗಳು–6












ಶ್ರೀ ವಿನಾಯಕನು ವಿದ್ಯೆ, ಬುದ್ಧಿ, ಮತ್ತು ವಿಘ್ನವಿನಾಶಕನಾದ ಆದಿದೇವನಾಗಿದ್ದು, ಭಾರತೀಯ ಸಂಸ್ಕೃತಿಯಲ್ಲಿ ಪ್ರಥಮ ಪೂಜಿತನಾಗಿದ್ದಾನೆ. ಮಹಾರಾಷ್ಟ್ರದಲ್ಲಿ 1892ರಲ್ಲಿ ಭೌಸಾಹೇಬ್ ರಂಗಾರಿಯವರು ಮೊಟ್ಟಮೊದಲ ಬಾರಿಗೆ ಸಾರ್ವಜನಿಕ ಗಣೇಶಮಂಡಳಿಯನ್ನು ಸ್ಥಾಪಿಸಿದರು. 1893ರಲ್ಲಿ ಲೋಕಮಾನ್ಯ ಬಾಲಗಂಗಾಧರ ತಿಲಕರು ಜನರನ್ನು ಒಗ್ಗೂಡಿಸಲು ಮತ್ತು ಸ್ವಾತಂತ್ರ್ಯ ಚಳುವಳಿಯ ಸಂದೇಶಗಳನ್ನು ತಲುಪಿಸಲು ಇದನ್ನು ದೊಡ್ಡ ಮಟ್ಟದಲ್ಲಿ ಜನಪ್ರಿಯಗೊಳಿಸಿ, ಸಾರ್ವಜನಿಕ ಸ್ವಾತಂತ್ರ್ಯ ಜಾಗೃತಿಯ ವೇದಿಕೆಯನ್ನಾಗಿ ರೂಪಿಸಿದರು. ಇಂದು ಭಾದ್ರಪದ ಮಾಸ ಶುಕ್ಲ ಪಕ್ಷದಲ್ಲಿ ಬರುವ ಶ್ರೀ ಗಣೇಶ ಚತುರ್ಥಿಯಂದು ದೇಶಾದ್ಯಂತ ಆಸ್ತಿಕ ಬಂಧುಗಳು ಗಣೇಶ ಮೂರ್ತಿಯನ್ನು ಪ್ರತಿಷ್ಠಾಪಿಸಿ ಪೂಜಿಸಿ, ಆರಾಧಿಸಿ, ಭಕ್ತಿ ಭಾವದಲ್ಲಿ ಮಿಂದೇಳುತ್ತಾರೆ.

## ಕರಾವಳಿ ಸಂಪುಟ ಸಭೆಯ ಹೊಸ್ತಿಲಲ್ಲಿ ಕೊರಗರ ಅಸ್ತಿತ್ವದ ಕೂಗು



**ಮಂಗಳೂರು:** ಕರಾವಳಿಯ ಅಭಿವೃದ್ಧಿಗೆ ಹೊಸ ದಿಕ್ಕು ನೀಡುವ ನಿರೀಕ್ಷೆಯೊಂದಿಗೆ ಸೆಪ್ಟೆಂಬರ್ 18ರಂದು ಮಂಗಳೂರಿನಲ್ಲಿ ರಾಜ್ಯ ಸರ್ಕಾರದ ವಿಶೇಷ ಸಚಿವ ಸಂಪುಟ ಸಭೆ ನಡೆಯಲಿದೆ. ಪ್ರವಾಸೋದ್ಯಮ, ಕೈಗಾರಿಕೆ, ಮೂಲಸೌಕರ್ಯ ಸೇರಿದಂತೆ ಹಲವು ಮಹತ್ವದ ವಿಚಾರಗಳು ಸಭೆಯ ಅಜೆಂಡಾದಲ್ಲಿರುವ ಬೆನ್ನಲ್ಲೇ, ಕರಾವಳಿಯ ಮೂಲ ನಿವಾಸಿಗಳಾದ ಕೊರಗ ಸಮುದಾಯದ ಬದುಕು ಮತ್ತು ಅಸ್ತಿತ್ವದ ಪ್ರಶ್ನೆಯೂ ಸರ್ಕಾರದ ಮುಂದಿದೆ. ಶತಮಾನಗಳ ಸಾಮಾಜಿಕ ತಾರತಮ್ಯ, ಭೂಹೀನತೆ, ಬಡತನ, ಅಪೌಷ್ಟಿಕತೆ ಹಾಗೂ ಅಜಲು ಪದ್ಧತಿಯಂತಹ ಶೋಷಣೆಯ ಪರಿಣಾಮಗಳನ್ನು ಎದುರಿಸುತ್ತಿರುವ **3ನೇ ಪುಟಕ್ಕೆ**

## ಅಡಿಕೆ ತೋಟದ ನೆರಳಲ್ಲಿ ಹೊಸ 'ಕಾಫಿ' ಆಶಾಕಿರಣ

**ಮಂಗಳೂರು:** ಕರಾವಳಿ ಮತ್ತು ಮಲೆನಾಡಿನ ತೋಗಗಾರಿಕಾ ವಲಯದಲ್ಲಿ ಅಡಿಕೆ ಬೆಳೆಗಾರರು ಕಳೆದ ಹಲವಾರು ವರ್ಷಗಳಿಂದ ಎಂದೂ ಕಾಣದ ಸಂಕಷ್ಟವನ್ನು ಎದುರಿಸುತ್ತಿದ್ದಾರೆ. ಹಳದಿ ಎಲೆ ರೋಗ, ಎಲೆ ಚುಕ್ಕಿ ರೋಗದಂತಹ ಮಾರಕ ಬಾಧೆಗಳು ಹಾಗೂ ಮಂಗ, ಕಾಡಾನೆ ಸೇರಿದಂತೆ ಕಾಡು ಪ್ರಾಣಿಗಳ ನಿರಂತರ ಹಾವಳಿಯಿಂದಾಗಿ ಸಾಂಪ್ರದಾಯಿಕ ಅಡಿಕೆ ತೋಟಗಳನ್ನು ರಕ್ಷಿಸಿಕೊಳ್ಳುವುದೇ ಸವಾಲಾಗಿ ಪರಿಣಮಿಸಿದೆ. ಈ ಬಿಕ್ಕಟ್ಟಿನ ನಡುವೆ, ಪಶ್ಚಿಮ ಘಟ್ಟದ ತಪ್ಪಲಿನ ಅಡಿಕೆ ಮಡಿಲಲ್ಲಿ ರೈತರು ಕಂಡುಕೊಂಡಿರುವ 'ಕಾಫಿ' ಎಂಬ ನೂತನ ಉಪಬೆಳೆ ಕರಾವಳಿಯ ಕೃಷಿ ಭೂಮಿಗೆ ಹೊಸ ಭರವಸೆಯಾಗಿ ಗೋಚರಿಸುತ್ತಿದೆ. ಸುಳ್ಯ, ಬೆಳ್ತಂಗಡಿ, ಕಡಬ ಹಾಗೂ ಮಲೆನಾಡಿನ ತಪ್ಪಲು ಭಾಗಗಳಲ್ಲಿ ಅಡಿಕೆಯ ನೆರಳಿನ ವಾತಾವರಣ, ತಾಪಮಾನ ಹಾಗೂ **3ನೇ ಪುಟಕ್ಕೆ**



## ಉಮರ್ ಖಾಲಿದ್ ಓರ್ವ ರಾಷ್ಟ್ರೀಯವಾದಿ –ಬಿ.ಕೆ.ಹರಿಪ್ರಸಾದ್

**ಬೆಂಗಳೂರು:** ಯುಎಪಿಎ ಕಾಯ್ದೆಯಡಿ ಬಂಧನಕ್ಕೊಳಗಾಗಿರುವ ವಿದ್ಯಾರ್ಥಿ ನಾಯಕ ಉಮರ್ ಖಾಲಿದ್ ಅವರು ಓರ್ವ ರಾಷ್ಟ್ರೀಯವಾದಿ, ದೇಶಭಕ್ತ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಹೇಳಿದ್ದಾರೆ. ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ ಯೂನಿವರ್ಸಿಟಿಯಲ್ಲಿ ಉಮರ್ ಖಾಲಿದ್ ಅವರ ಕುರಿತ ಸಾಕ್ಷ್ಯಚಿತ್ರ ಪ್ರದರ್ಶನಕ್ಕೆ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಉದ್ದೇಶ ಪೂರಕವಾಗಿಯೇ ವಿರೋಧ ವ್ಯಕ್ತಪಡಿಸಿದೆ. ಆದರೆ, ಉಮರ್ **3ನೇ ಪುಟಕ್ಕೆ**









## ಉಮರ್‌ಖಾಲಿದ್ ಓರ್ವ ರಾಷ್ಟ್ರೀಯವಾದಿ– ಬಿ.ಕೆ.ಹರಿಪ್ರಸಾದ್

ಒಂದನೇ ಪುಟದಿಂದ......

ಖಾಲಿದ್ ಒಬ್ಬರಾಷ್ಟ್ರೀಯವಾದಿ, ರಾಷ್ಟ್ರಭಕ್ತ. ಅವರ ಬಗ್ಗೆ ಮಾತನಾಡಲು ಎಬಿವಿಪಿಗೆ ಯಾವುದೇ ಹಕ್ಕು ಅಥವಾ ನೈತಿಕತೆಯಿಲ್ಲ ಎಂದು ಟೀಕಿಸಿದರು. ಭಾರತ ದೇಶದ ಮೊಟ್ಟ ಮೊದಲ ಭಯೋತ್ಪಾದಕ ಮತ್ತು ದೇಶದ್ರೋಹಿ ಎಂದರೆ ಅದು ನಾಥೂರಾಮ್ ಗೋಡ್ಸೆ ಮಾತ್ರ, ಈತನನ್ನು ಆರಾಧಿಸುವವರು, ಪೂಜಿಸುವವರಿಗೆ ಉಮರ್‌ಖಾಲಿದ್ ಬಗ್ಗೆ ವಿಮರ್ಶೆ ಮಾಡಲು ಯಾವ ಅರ್ಹತೆಯಿದೆ ಎಂದು ಹರಿಪ್ರಸಾದ್ ಪ್ರಶ್ನಿಸಿದ್ದಾರೆ. ರಾಜಕೀಯ ಕೈದಿಗಳ ದಿನವಾದ ಸೆ.13 ಹಾಗೂ ಉಮರ್‌ಖಾಲಿದ್ ಬಂಧನದ ಆರನೇ ವರ್ಷದ ಅಂಗವಾಗಿ, ಲಲಿತ್ ವಚಾನಿ ನಿರ್ದೇಶನದ 'ಪ್ರಿಸನರ್ ನಂ. 626710 ಈಸ್ ಪ್ರೆಸೆಂಟ್' ಸಾಕ್ಷ್ಯಚಿತ್ರವನ್ನು ಪ್ರದರ್ಶಿಸಲು ನ್ಯಾಷನಲ್ ಲಾ ಸ್ಕೂಲ್ಆಫ್ ಇಂಡಿಯಾ ಯೂನಿವರ್ಸಿಟಿಯ ಕಾನೂನು ಮತ್ತು ಸಮಾಜ ಸಮಿತಿ ನಿರ್ಧರಿಸಿತ್ತು. ಆದರೆ, ಈ ಪ್ರದರ್ಶನವನ್ನು ಸಂಪೂರ್ಣವಾಗಿ ರದ್ದುಗೊಳಿಸಬೇಕು ಎಂದು ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಆಗ್ರಹಿಸಿತ್ತು. ಈ ಕುರಿತು ಪರ–ವಿರೋಧ ಚರ್ಚೆಗಳು ನಡೆದಿದ್ದವು. ಈ ಸಂದರ್ಭದಲ್ಲಿ ಮಾತನಾಡಿರುವ ಬಿಕೆ ಹರಿಪ್ರಸಾದ್ ವಿದ್ಯಾರ್ಥಿ ನಾಯಕ ಉಮರ್‌ಖಾಲಿದ್ ಅವರು ಓರ್ವ ರಾಷ್ಟ್ರೀಯವಾದಿ, ದೇಶಭಕ್ತರೆಂದು ಪ್ರತಿಪಾದಿಸಿದ್ದಾರೆ.

## ಕರಾವಳಿ ಸಂಪುಟ ಸಭೆಯ ಹೊಸ್ತಿಲಲ್ಲಿ ಕೊರಗರ ಅಸ್ತಿತ್ವದ ಕೂಗು

ಒಂದನೇ ಪುಟದಿಂದ......

ಕೊರಗ ಸಮುದಾಯ, ಇದೀಗ ತಮ್ಮ ಉಳಿವಿಗಾಗಿ ಕನಿಷ್ಠ 500 ಎಕರೆ ಭೂಮಿಯಲ್ಲಿ ಸಾಮೂಹಿಕ ಪುನರ್ವಸತಿ ಕಲ್ಪಿಸುವಂತೆ ಸರ್ಕಾರವನ್ನು ಒತ್ತಾಯಿಸುತ್ತಿದೆ. ಕೊರಗ ಸಮುದಾಯವನ್ನು ಕೇಂದ್ರ ಸರ್ಕಾರ ವಿಶೇಷವಾಗಿ ದುರ್ಬಲ ಬುಡಕಟ್ಟು ಗುಂಪು ಎಂದು ಗುರುತಿಸಿದೆ. ಆದರೆ ಜನಸಂಖ್ಯೆಯ ಬೆಳವಣಿಗೆಯ ಬದಲು ಇಳಿಕೆಯ ಆತಂಕ ಎದುರಾಗಿದೆ. 2011ರ ಜನಗಣತಿಯ ಪ್ರಕಾರ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 4,458ರಷ್ಟಿದ್ದ ಕೊರಗರ ಜನಸಂಖ್ಯೆ ಇತ್ತೀಚಿನ ಸಮೀಕ್ಷೆಯ ವೇಳೆಗೆ 4,333ಕ್ಕೆ ಇಳಿದಿದ್ದು, ಸುಮಾರು 1,133 ಕುಟುಂಬಗಳು ಮಾತ್ರ ಉಳಿದಿವೆ. ಊರಿಗೊಂದು, ಕಾಡಿಗೊಂದು ಕುಟುಂಬದಂತೆ ಚದುರಿ ಬದುಕುತ್ತಿರುವುದರಿಂದ ಸಮುದಾಯದೊಳಗಿನ ಸಾಮಾಜಿಕ ಭದ್ರತೆ ಮತ್ತು ಪರಸ್ಪರ ಸಹಕಾರವೂ ದುರ್ಬಲವಾಗುತ್ತಿದೆ. ಹೀಗಾಗಿ ಕೇವಲ ಮನೆ ನಿವೇಶನ ನೀಡುವುದರಿಂದ ಸಮಸ್ಯೆ ಪರಿಹಾರವಾಗುವುದಿಲ್ಲ. ಒಟ್ಟಾಗಿ ನೆಲೆಸುವ ಭೂಮಿ, ಕೃಷಿ ಆಧಾರಿತ ಜೀವನೋಪಾಯ ಮತ್ತು ಸಾಮಾಜಿಕ ಭದ್ರತೆ ಅಗತ್ಯ ಎಂಬುದು ಸಮುದಾಯದ ಪ್ರಮುಖವಾದವಾಗಿದೆ. ಕೊರಗರ ಭೂಮಿ ಮತ್ತು ಪುನರ್ವಸತಿ ವಿಚಾರ ಹೊಸದಲ್ಲ. 1993ರಲ್ಲಿ ಸಾವಿರಾರುಕೊರಗರು ನಡೆಸಿದ ಹೋರಾಟದ ಬಳಿಕ ಡಾ. ಮಹಮ್ಮದ್ ಪೀರ್ ನೇತೃತ್ವದ ವರದಿ ರಚನೆಯಾಗಿದ್ದು, ಪ್ರತಿಯೊಂದು ಕೊರಗ ಕುಟುಂಬಕ್ಕೂ ಕನಿಷ್ಠ 2.5 ಎಕರೆ ಕೃಷಿ ಭೂಮಿ ನೀಡಿ ಪುನರ್ವಸತಿ ಕಲ್ಪಿಸುವಂತೆ ಶಿಫಾರಸು ಮಾಡಲಾಗಿತ್ತು. ಆದರೆ ಆ ಶಿಫಾರಸಿನ ಸಂಪೂರ್ಣ ಅನುಷ್ಠಾನವಾಗಿಲ್ಲ ಎಂಬ ಅಸಮಾಧಾನ ಸಮುದಾಯದಲ್ಲಿದೆ. ನಂತರ ನಡೆದ ಹೋರಾಟಗಳ ನಡುವೆಯೂ ಕೆಲವೆಡೆ ದೊರೆತ ಭೂಮಿಯು ಕೃಷಿಗೆ ಯೋಗ್ಯವಲ್ಲದ ಬಂಜರು ಪ್ರದೇಶವಾಗಿತ್ತು ಎಂಬ ಆರೋಪವೂ ಕೇಳಿಬಂದಿದೆ. ಈ ಅನುಭವಗಳ ಹಿನ್ನೆಲೆಯಲ್ಲಿ ಇದೀಗ ಸಮುದಾಯವು ಮತ್ತೊಮ್ಮೆ ತನ್ನ ಬೇಡಿಕೆಯನ್ನು ಸ್ಪಷ್ಟವಾಗಿ ಮುಂದಿಟ್ಟಿದೆ. ಜಿಲ್ಲೆಯ ಯಾವುದೇ ಸೂಕ್ತ ಪ್ರದೇಶದಲ್ಲಿ ಕನಿಷ್ಠ 500 ಎಕರೆ ಸರ್ಕಾರಿ ಭೂಮಿಯನ್ನು ಗುರುತಿಸಿ ಕಾದಿರಿಸಬೇಕು ಎಂಬುದು ಪ್ರಮುಖ ಬೇಡಿಕೆ.

## ಅಡಿಕೆ ತೋಟದ ನೆರಳಲ್ಲಿ ಹೊಸ 'ಕಾಫಿ' ಆಶಾಕಿರಣ

ಒಂದನೇ ಪುಟದಿಂದ......

ಹವಾಗುಣ ಕಾಫಿ ಬೆಳೆಗೆ ಅತ್ಯಂತ ಪೂರಕವಾಗಿದೆ. ಅಡಿಕೆಗೆ ಪರ್ಯಾಯ ಎನ್ನುವುದಕ್ಕಿಂತ ಹೆಚ್ಚಾಗಿ, ಅತ್ಯುತ್ತಮ 'ಉಪಬೆಳೆ'ಯಾಗಿ ಕಾಫಿ ಗಿಡಗಳನ್ನು ಅಡಿಕೆ ಸಾಲುಗಳ ಮಧ್ಯೆ ಬೆಳೆಯಲು ಕೃಷಿ ಇಲಾಖೆಗಳು ಮತ್ತು ಪ್ರಗತಿಪರ ರೈತರು ಪ್ರೇರೇಪಿಸಿದ್ದಾರೆ. ಈಗಾಗಲೇ ಹಲವು ರೈತರು ಗಿಡಗಳನ್ನು ನೆಟ್ಟು ಯಶಸ್ವಿಯಾಗಿದ್ದು, ಮುಂಬರುವ ಮೂರ್ನಾಲ್ಕು ವರ್ಷಗಳಲ್ಲಿ ಈ ಭಾಗದಿಂದ ಭಾರಿ ಪ್ರಮಾಣದ ಕಾಫಿ ಫಸಲು ಮಾರುಕಟ್ಟೆಗೆ ಲಭ್ಯವಾಗುವ ನಿರೀಕ್ಷೆಯಿದೆ. ಆದರೆ, ಕೇವಲ ಬೆಳೆಯುವುದಷ್ಟೇ ಅಲ್ಲದೆ, ಈ ಕರಾವಳಿ ಕಾಫಿಗೆ ಪ್ರತ್ಯೇಕ ಮಾರುಕಟ್ಟೆ ಹಾಗೂ ಗುರುತನ್ನು ಸೃಷ್ಟಿಸಬೇಕಾದ ಅನಿವಾರ್ಯತೆಯಿದೆ. ಕೊಡಗು, ಚಿಕ್ಕಮಗಳೂರಿನ ಕಾಫಿಗೆ ತನ್ನದೇ ಆದ ಫ್ಲೇವರ್ ಇರುವಂತೆ, ಕರಾವಳಿ ಹಾಗೂ ಮಲೆನಾಡಿನ ತಪ್ಪಲು ಭಾಗದ ಕಾಫಿಗೆ ವಿಶಿಷ್ಟ ರುಚಿ ಮತ್ತು ಬ್ರಾಂಡ್ ರೂಪಿಸಬೇಕೆಂಬ ಒತ್ತಾಯ ಬೆಳೆಗಾರರ ವಲಯದಿಂದ ಬಲವಾಗಿ ಕೇಳಿಬರುತ್ತಿದೆ. ಇತ್ತ ಬೆಳೆಗಾರರ ಆಸರೆಗೆ ನಿಲ್ಲುವ ನಿಟ್ಟಿನಲ್ಲಿ ಸಹಕಾರಿ ಸಂಸ್ಥೆ ಕ್ಯಾಂಪ್ಕೋ ಅಧ್ಯಕ್ಷ ಎಸ್.ಆರ್. ಸತೀಶ್ಚಂದ್ರ ಅವರು ಮಾತನಾಡಿ, "ಅಡಿಕೆ ತೋಟಗಳು ರೋಗ ಹಾಗೂ ಪ್ರಾಣಿಗಳಿಂದ ನಾಶವಾಗುತ್ತಿರುವ ಕಷ್ಟದ ಸಂದರ್ಭದಲ್ಲಿ ರೈತರ ನೆರವಿಗೆ ಧಾವಿಸುವುದು ನಮ್ಮ ಕರ್ತವ್ಯ. ಅಡಿಕೆಯೊಂದಿಗೆ ಕಾಫಿ ಬೆಳೆಯಲು ಈಗಾಗಲೇ ನಮ್ಮ ಬೈಲಾದಲ್ಲಿ ಅವಕಾಶ ಕಲ್ಪಿಸಲಾಗಿದೆ. ರೈತರು ಕಾಫಿ ಗಿಡ ನೆಟ್ಟು ಒಂದೆರಡು ವರ್ಷಗಳಾಗಿದ್ದು, ಮೂರ್ನಾಲ್ಕು ವರ್ಷಗಳಲ್ಲಿ ಫಸಲು ಬರುವ ಹೊತ್ತಿಗೆ ಕ್ಯಾಂಪ್ಕೋ ವತಿಯಿಂದ ಕಾಫಿ ಖರೀದಿ, ಸಂಸ್ಕರಣೆ ಹಾಗೂ ವ್ಯವಸ್ಥಿತ ಮಾರ್ಕೆಟಿಂಗ್ ವ್ಯವಸ್ಥೆಯನ್ನು ರೂಪಿಸಲು ಆಡಳಿತ ಮಂಡಳಿ ಗಂಭೀರ ಚಿಂತನೆ ನಡೆಸಿದೆ" ಎಂದು ತಿಳಿಸಿದ್ದಾರೆ.

## ಉದ್ಯೋಗಸ್ಥ ಮಹಿಳೆಯರ ವಸತಿ ನಿಲಯ ಪ್ರವೇಶಾತಿ: ಅರ್ಜಿ ಆಹ್ವಾನ

ಮಂಗಳೂರು – ಕೊಣಾಜೆ ಮಂಗಳಗಂಗೋತ್ರಿ ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ಉದ್ಯೋಗಸ್ಥ ಮಹಿಳೆಯರ ವಸತಿನಿಲಯಕ್ಕೆ ಪ್ರವೇಶ ಪಡೆಯಲು ಉದ್ಯೋಗಸ್ಥ ಮಹಿಳೆಯರಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ. ಪ್ರವೇಶ ಪಡೆಯಲು ಹೊಂದಿರಬೇಕಾದ ಅರ್ಹತೆ ಹಾಗೂ ಪ್ರವೇಶ ಶುಲ್ಕಕ್ಕೆ ಸಂಬಂಧಿಸಿದ ಮಾಹಿತಿಯನ್ನು ವಸತಿನಿಲಯದ ಕಛೇರಿಯಿಂದ ಪಡೆಯಬಹುದು ಎಂದು ಉದ್ಯೋಗಸ್ಥ ಮಹಿಳೆಯರ ವಸತಿನಿಲಯದ ಅಧ್ಯಾಪಕ ಸಲಹೆಗಾರರು(ದೂರವಾಣಿ ಸಂಖ್ಯೆ: 7353812285) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬ್ಯೂಟಿಷಿಯನ್ ತರಬೇತಿ: ಅರ್ಜಿ ಆಹ್ವಾನ

ಮಂಗಳೂರು – ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಅವರ ಪ್ರಾಯೋಜಕತ್ವದಲ್ಲಿ ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ (ಸಿಡಾಕ್), ಧಾರವಾಡ, ಸಿಡಾಕ್, ಮಂಗಳೂರು, ಭಾರತೀಯ ವಿಕಾಸ್ ಟ್ರಸ್ಟ್, ಮಣಿಪಾಲ ಇವರ ಸಂಯುಕ್ತ ಆಶ್ರಯದಲ್ಲಿ ಸ್ವಂತ ಉದ್ಯೋಗವನ್ನು ಸ್ಥಾಪಿಸಲು ಇಚ್ಛಿಸುವವರಿಗಾಗಿ 30 ದಿನಗಳ ಬ್ಯೂಟಿಷಿಯನ್ ತರಬೇತಿಯನ್ನು ಉಚಿತವಾಗಿ ಎಲ್ಲಾ ವರ್ಗದ ಮಹಿಳಾ ಅಭ್ಯರ್ಥಿಗಳಿಗೆ ಸೆಪ್ಟೆಂಬರ್ 23ರಿಂದ ಅಕ್ಟೋಬರ್ 28ರವರೆಗೆ ಮಂಗಳೂರಿನಲ್ಲಿ ಆಯೋಜಿಸಲಾಗಿದೆ. ಅರ್ಜಿ ಸಲ್ಲಿಸಲು ಬಯಸುವವರು ನಗರದ ಉರ್ವ ಮಾರ್ಕೆಟ್ ಕಟ್ಟಡದ ಎರಡನೇ ಮಹಡಿಯಲ್ಲಿರುವ ಸಿಡಾಕ್ ಉಪ ನಿರ್ದೇಶಕರ ಕಛೇರಿ (ದೂರವಾಣಿ ಸಂಖ್ಯೆ: 9448812974, 9880181473, 9886035251) ಸಂಪರ್ಕಿಸಬಹುದು.

## ಮೀನುಮರಿ ಖರೀದಿಗೆ ಸಹಾಯಧನ : ಆನ್‌ಲೈನ್ ಅರ್ಜಿ ಆಹ್ವಾನ

ಶಿವಮೊಗ್ಗ – ಮೀನುಗಾರಿಕೆ ಇಲಾಖೆಯು 2026-27ನೇ ಸಾಲಿನ ಜಿಲ್ಲಾ ವಲಯ ಮೀನುಗಾರಿಕೆ ಯೋಜನೆಯಡಿ ಮೀನುಮರಿ ಖರೀದಿಗೆ ಸಹಾಯಧನ ಪಡೆಯಲು ಅರ್ಹ ಫಲಾನುಭವಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಹೆಚ್ಚಿನ ವಿವರಗಳಿಗಾಗಿ ಆಯಾ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿ ಅಥವಾ ಆಯಾ ತಾಲೂಕು ಮೀನುಗಾರಿಕೆ ಸಹಾಯಕ ನಿರ್ದೇಶಕರ ಮೊಬೈಲ್ ಸಂಖ್ಯೆ ಶಿವಮೊಗ್ಗ–9986040981, ಭದ್ರಾವತಿ–9743370815, ಶಿಕಾರಿಪುರ– 96869 39028, ಸಾಗರ –9538044365, ಸೊರಬ –9535386449, ತೀರ್ಥಹಳ್ಳಿ– 86551 32438 ಇವರುಗಳನ್ನು ಸಂಪರ್ಕಿಸಬಹುದೆಂದು ಮೀನುಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ವಿವಿಧ ಯೋಜನೆಯಡಿ ಅರ್ಜಿ ಆಹ್ವಾನ

ಶಿವಮೊಗ್ಗ:ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದ ವತಿಯಿಂದ 2026-27ನೇ ಸಾಲಿನ ವಿವಿಧ ಯೋಜನೆಗಳಡಿ ಸೌಲಭ್ಯ ನೀಡಲು ಅರ್ಹ ಅಭ್ಯರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಆರ್ಯವೈಶ್ಯ ಸಮುದಾಯದ ಅರ್ಜಿದಾರರು ವೆಬ್ ಪೋರ್ಟಲ್ https://kacdc.karnataka.gov.in ಮೂಲಕ ಅ.15 ರೊಳಗಾಗಿ ಅರ್ಜಿ ಸಲ್ಲಿಸುವಂತೆ ನಿಗಮದ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ನಿಗಮದ ದೂ.ಸಂ.: 9448451111/ 9611612302 ಸಂಪರ್ಕಿಸಬಹುದು.

## ಅಲೆಮಾರಿ ಅಭಿವೃದ್ಧಿ ನಿಗಮದಿಂದ ಅರ್ಜಿ ಆಹ್ವಾನ

ಮಡಿಕೇರಿ – ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ನಿಗಮದ ವತಿಯಿಂದ 2026-27ನೇ ಸಾಲಿನಲ್ಲಿ ವಿವಿಧ ಯೋಜನೆ ಅನುಷ್ಠಾನಗೊಳಿಸಲಾಗುತ್ತಿದ್ದು, ಈ ಯೋಜನೆಗಳಡಿ ಸಹಾಯಧನ/ ಸಾಲ–ಸೌಲಭ್ಯವನ್ನು ಪಡೆಯಲು ಅರ್ಜಿಗಳನ್ನು ಕಡ್ಡಾಯವಾಗಿ ಸೇವಾಸಿಂಧು ಪೋರ್ಟಲ್ ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಿದೆ. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್‌ಸೈಟ್ https://kaad.karnataka.gov.in/ ರಲ್ಲಿ ಅಥವಾ ನಿಗಮದ ಕೇಂದ್ರ ಕಚೇರಿ ದೂರವಾಣಿ ಸಂಖ್ಯೆ : 080–22374832/833 ಯಿಂದ ಪಡೆಯಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಷ್ಯಾದ ಬ್ರಿಕ್ಸ್ ಸಮ್ಮೇಳನ : ವಿವೇಕ್ ಆಳ್ವ ಮುಖ್ಯ ಭಾಷಣ



ಮೂಡುಬಿದಿರೆ: ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಟ್ರಸ್ಟಿ ವಿವೇಕ್ ಆಳ್ವ ಸೇರಿದಂತೆ ಭಾರತದ ಐವರು ವಿಷಯ ತಜ್ಞರು ರಷ್ಯಾದ ಕರೇಲಿಯಾ ಗಣರಾಜ್ಯದ ಪೆಟ್ರೋಜಾವೊಡ್ಸ್ಕ್‌ನಲ್ಲಿ ಸೆಪ್ಟೆಂಬರ್ 15 ರಿಂದ 17ರವರೆಗೆ ನಡೆಯಲಿರುವ 'ಬ್ರಿಕ್ಸ್ ರಾಷ್ಟ್ರಗಳ ಪ್ರಾದೇಶಿಕ ಸಹಕಾರದ ಮೂಲಕ ಪರಿಸರ ಮತ್ತು ಪ್ರಕೃತಿ ನಿರ್ವಹಣೆ' ವಿಷಯದ ಮೂರನೇ ಅಂತರರಾಷ್ಟ್ರೀಯ ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ. ರಷ್ಯನ್ ವಿಜ್ಞಾನ ಅಕಾಡೆಮಿಯ ಕರೇಲಿಯನ್ ಸಂಶೋಧನಾ ಕೇಂದ್ರದ ರಷ್ಯನ್ ರಾಷ್ಟ್ರೀಯ ಬ್ರಿಕ್ಸ್ ಸಂಶೋಧನಾ ಸಮಿತಿಯ ಸಹಯೋಗದಲ್ಲಿ ಈ ಸಮ್ಮೇಳನವನ್ನು ಆಯೋಜಿಸಿದೆ. ಈ ಸಮ್ಮೇಳನದಲ್ಲಿ ವಿವೇಕ್ ಆಳ್ವ ಅವರು "ಪಶ್ಚಿಮ ಘಟ್ಟಗಳ ಸಂರಕ್ಷಣೆ: ಜಾಗೃತಿಯಿಂದ ಸಮುದಾಯದ ಕಾರ್ಯದತ್ತ" ಎಂಬ ವಿಷಯದ ಕುರಿತು ಮುಖ್ಯ ಭಾಷಣ ಮಾಡಲಿದ್ದಾರೆ. ಪರಿಸರ ಸಂರಕ್ಷಣೆಯಲ್ಲಿ ಸಮುದಾಯಗಳು ಹಾಗೂ ಯುವಜನರ ಪಾತ್ರವನ್ನು ವಿವರಿಸಲಿರುವ ಅವರು, ಪಶ್ಚಿಮಘಟ್ಟಗಳ ಪರಿಸರ ಸಂರಕ್ಷಣೆ ಕುರಿತು ತಮ್ಮ ವಿಚಾರಗಳನ್ನು ಮಂಡಿಸಲಿದ್ದಾರೆ.

## ಯುಎಇಯ ತುಂಬೆ ಮೆಡಿಸಿಟಿಗೆ ಸಚಿವ ಕೆ.ಜೆ. ಜಾರ್ಜ್ ಭೇಟಿ




ಯುಎಇ: ಕರ್ನಾಟಕ ಸರ್ಕಾರದ ಇಂಧನ ಮತ್ತು ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ಅವರು ಯುಎಇಯ ಅಜ್ಮಾನ್‌ನಲ್ಲಿರುವ 'ತುಂಬೆ ಮೆಡಿಸಿಟಿ'ಗೆ ಅಧಿಕೃತ ಭೇಟಿ ನೀಡಿದ್ದಾರೆ. ಈ ಭೇಟಿಯು ಕರ್ನಾಟಕ ಮತ್ತು ಯುಎಇ ನಡುವಿನ ಆರೋಗ್ಯ, ವೈದ್ಯಕೀಯ ಶಿಕ್ಷಣ ಮತ್ತು ಪ್ರವಾಸೋದ್ಯಮ ಕ್ಷೇತ್ರಗಳ ಬಾಂಧವ್ಯವನ್ನು ಮತ್ತಷ್ಟು ಗಟ್ಟಿಗೊಳಿಸುವ ನಿಟ್ಟಿನಲ್ಲಿ ಪ್ರಮುಖ ಹೆಜ್ಜೆಯಾಗಿದೆ. ಕ್ಯಾಂಪಸ್‌ಗೆ ಆಗಮಿಸಿದ ಸಚಿವರನ್ನು ತುಂಬೆ ಗ್ರೂಪ್‌ನ ಸಂಸ್ಥಾಪಕ ಅಧ್ಯಕ್ಷ ಡಾ. ತುಂಬೆ ಮೊಯ್ದೀನ್ ಹಾಗೂ ಆಡಳಿತ ಮಂಡಳಿಯ ಹಿರಿಯ ನಾಯಕರು ಗೌರವಪೂರ್ವಕವಾಗಿ ಬರಮಾಡಿಕೊಂಡರು. ತಮ್ಮ ಭೇಟಿಯ ವೇಳೆ ಸಚಿವರು ಗಲ್ಫ್ ಮೆಡಿಕಲ್ ಯೂನಿವರ್ಸಿಟಿ, ತುಂಬೆ ಯೂನಿವರ್ಸಿಟಿ ಆಸ್ಪತ್ರೆ ಮತ್ತು ತುಂಬೆ ರಿಹ್ಯಾಬಿಲಿಟೇಶನ್ (ಪುನರ್ವಸತಿ) ಆಸ್ಪತ್ರೆ ಸೇರಿದಂತೆ ಪ್ರಮುಖ ವಿಭಾಗಗಳಿಗೆ ತೆರಳಿ, ಅಲ್ಲಿನ ಸುಸಜ್ಜಿತ ಮೂಲಸೌಕರ್ಯ, ಶೈಕ್ಷಣಿಕ ವಾತಾವರಣ ಹಾಗೂ ಸಂಶೋಧನಾ ವ್ಯವಸ್ಥೆಯನ್ನು ಪರಿಶೀಲಿಸಿದರು.

## ಬಂಟರು ನಾಯಕತ್ವ ಹಾಗೂ ಎದೆಗಾರಿಕೆಯುಳ್ಳ ಸಾಧಕರು : ಇನಾಯತ್ ಆಲಿ




ಮಂಗಳೂರು: ಬಂಟ ಸಮುದಾಯದವರು ಸಮಾಜದ ಪ್ರತಿಯೊಂದು ರಂಗದಲ್ಲೂ ತಮ್ಮದೇ ಆದ ಅನನ್ಯ ಛಾಪು ಮೂಡಿಸಿದ್ದು, ಕೇವಲ ನಾಯಕತ್ವ ಗುಣ ಮತ್ತು ಎದೆಗಾರಿಕೆ ಮಾತ್ರವಲ್ಲದೆ ಇತರ ಸಮುದಾಯದವರನ್ನು ಪ್ರೀತಿಯಿಂದ ಕಾಣುವ ಉದಾರ ಗುಣವನ್ನು ಹೊಂದಿದ್ದಾರೆ ಎಂದು ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಇನಾಯತ್ ಆಲಿ ತಿಳಿಸಿದರು. ನಗರದ ಬಂಟ್ಸ್ ಹಾಸ್ಟೇಲ್‌ನಲ್ಲಿ ಬಂಟರ ಯಾನೆ ನಾಡವರ ಮಾತೃ ಸಂಘ, ಶ್ರೀ ಸಿದ್ದಿವಿನಾಯಕ ಪ್ರತಿಷ್ಠಾನ ಹಾಗೂ ಸಾರ್ವಜನಿಕ ಶ್ರೀ ಗಣೇಶೋತ್ಸವ ಸಮಿತಿಯ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾದ 20ನೇ ವರ್ಷದ ಸಾರ್ವಜನಿಕ ಶ್ರೀ ಗಣೇಶೋತ್ಸವದ ಪ್ರಥಮ ದಿನದ ಧಾರ್ಮಿಕ ಸಭೆಯಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು. ಚಲನಚಿತ್ರ ರಂಗ ಸೇರಿದಂತೆ ವಿವಿಧ ಕ್ಷೇತ್ರಗಳಿಗೆ ಬಂಟ ಸಮುದಾಯ ನೀಡಿರುವ ಕೊಡುಗೆ ಅಪಾರವಾಗಿದ್ದು, ನಾಯಕತ್ವದ ಶಕ್ತಿಯಿಂದ ಸಮುದಾಯವು ಪ್ರತಿಯೊಂದು ಕ್ಷೇತ್ರದಲ್ಲಿ ಗೆಲುವು ಸಾಧಿಸಿದೆ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

## ತುಳು ಅಭಿವೃದ್ಧಿ ನಿಗಮ ಸ್ಥಾಪನೆಗೆ ತುಳು ಪರಿಷತ್ ಮನವಿ



ಮಂಗಳೂರು : ಮಂಗಳೂರಿನ ತುಳು ಪರಿಷತ್ ಸಂಘಟನೆಯು ತುಳು ಭಾಷೆ, ಸಂಸ್ಕೃತಿ ಮತ್ತು ಸಾಹಿತ್ಯದ ಸಂರಕ್ಷಣೆ ಹಾಗೂ ಬೆಳವಣಿಗೆಯ ಉದ್ದೇಶದಿಂದ 'ತುಳು ಅಭಿವೃದ್ಧಿ ನಿಗಮ' ಸ್ಥಾಪನೆ ಮಾಡಲು ಮತ್ತು ಶಾಲಾ-ಕಾಲೇಜುಗಳಲ್ಲಿ ತುಳು ಭಾಷೆಯನ್ನು ದ್ವಿತೀಯ ಭಾಷೆಯಾಗಿ ಕಲಿಯಲು ಅವಕಾಶ ಕಲ್ಪಿಸಿ ಕೊಡುವಂತೆ ಮಂಗಳೂರಿನಲ್ಲಿ ನಡೆಯುವ ಸಚಿವ ಸಂಪುಟ ಸಭೆಯಲ್ಲಿ ನಿರ್ಧರಿಸಬೇಕೆಂದು ಮಾನ್ಯ ಮುಖ್ಯಮಂತ್ರಿಗಳಿಗೆ ವಿನಂತಿ ಸಲ್ಲಿಸಿದೆ ಎಂದು ಪರಿಷತ್ತಿನ ಅಧ್ಯಕ್ಷ ಕೆ. ಸುಭೋದಯ ಆಳ್ವ ಪತ್ರಿಕಾಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು. ಕಳೆದ ಆರು ವರ್ಷಗಳಿಂದ ಸ್ವತಂತ್ರವಾಗಿ ಕಾರ್ಯನಿರ್ವಹಿಸುತ್ತಿರುವ ತುಳು ಪರಿಷತ್, ಪ್ರೌಢಶಾಲೆ ಹಾಗೂ ಪದವಿ ಮಟ್ಟದಲ್ಲಿ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳಲ್ಲಿ ತುಳು ಭಾಷಾಭಿಮಾನ ಬೆಳೆಸಲು ಮತ್ತು ತುಳು ಸಾಹಿತ್ಯದ ಜಾಗೃತಿ ಮೂಡಿಸಲು 'ಬೃಹತ್ ವಿದ್ಯಾರ್ಥಿ ಸಮ್ಮೇಳನ'ಗಳನ್ನು ಆಯೋಜಿಸುತ್ತಾ ಬಂದಿದೆ ಎಂದು ಮಾಹಿತಿ ನೀಡಿದರು. ಪ್ರಸ್ತುತ ತುಳು ಭಾಷೆಯ ಉಳಿವು ಹಾಗೂ ಪ್ರಸಾರಕ್ಕಾಗಿ ಸರ್ಕಾರದ ಹಂತದಲ್ಲಿ ಬೆಂಬಲದ ಅಗತ್ಯವಿದ್ದು, 'ತುಳು ಅಭಿವೃದ್ಧಿ ನಿಗಮ'ವನ್ನು ಸ್ಥಾಪಿಸಿದರೆ ಭಾಷೆ ಮತ್ತು ಸಂಸ್ಕೃತಿ ಮತ್ತಷ್ಟು ಪ್ರಗತಿ ಕಾಣಲು ನೆರವಾಗಲಿದೆ ಎಂದು ಸಂಘಟನೆ ಪರವಾಗಿ ತಿಳಿಸಿದರು.

## ಮೂಡುಬಿದಿರೆಯಲ್ಲಿ ಅನಾವರಣಗೊಂಡ ಕೇರಳದ ಶ್ರೀಮಂತ ಸಾಂಸ್ಕೃತಿಕ ಪರಂಪರೆ




ಮೂಡುಬಿದಿರೆ: ಕೇರಳದ ಶ್ರೀಮಂತ ಕಲೆ, ಸಂಸ್ಕೃತಿ, ಪರಂಪರೆ ಹಾಗೂ ವೈವಿಧ್ಯಮಯ ಜೀವನಶೈಲಿಯನ್ನು ಕರ್ನಾಟಕದ ನೆಲದಲ್ಲಿ ಅನಾವರಣಗೊಳಿಸುವ 'ಆಳ್ವಾಸ್ ಕೇರಳೀಯಂ –2026' ಕಾರ್ಯಕ್ರಮವು ಆಳ್ವಾಸ್ ವಿದ್ಯಾಸಂಸ್ಥೆಯ ಮುಂಡ್ರುದೆಗುತ್ತು ಕೆ. ಅಮರನಾಥ್ ಶೆಟ್ಟಿ ವೇದಿಕೆಯಲ್ಲಿ ಇತ್ತೀಚೆಗೆ ಅತ್ಯಂತ ವೈಭವದಿಂದ ನಡೆಯಿತು. ಕೇರಳದ ಸಾಂಸ್ಕೃತಿಕ ಸೌಂದರ್ಯವನ್ನು ಒಂದೇ ವೇದಿಕೆಯಲ್ಲಿ ಕಟ್ಟಿ ಕೊಟ್ಟ ಭವ್ಯ ಮೆರವಣಿಗೆಯಷ್ಟೇ ಅಲ್ಲದೆ, ವಿದ್ಯಾರ್ಥಿಗಳ ಕಲಾತ್ಮಕ ಪ್ರದರ್ಶನಗಳು ಕಾರ್ಯಕ್ರಮಕ್ಕೆ ಪ್ರಮುಖ ಆಕರ್ಷಣೆಯಾಗಿದ್ದವು. ಮೆರವಣಿಗೆಯಲ್ಲಿ ಸಾಂಪ್ರದಾಯಿಕ ವೇಷ ಭೂಷಣ, ಜನಪದ ಕಲೆ, ಶಾಸ್ತ್ರೀಯ ನೃತ್ಯ, ವಾದ್ಯ ಸಂಗೀತ ಮತ್ತು ಆಚರಣೆಗಳ ಸೊಬಗು ಮೆರೆದವು. ಕಥಕಳಿ, ಮೋಹಿನಿಯಾಟ್ಟಂ, ಮಾ ವೇಲಿ ಪಾತ್ರಗಳ ಜೊತೆಗೆ ಪಂಚವಾದ್ಯ, ತಾಲ ಪೊಲಿ, ಪುಲಿಕಳಿ, ಚೆಂಡೆ ವಾದನ, ಕಾವಡಿ, ಒಪ್ಪನ, ಕೋಲ್ಕಳಿ, ಕಲರಿ ಹಾಗೂ ತೆಯ್ಯಂ ನಂತಹ ವಿಶಿಷ್ಟ ಕಲಾ ಪ್ರಕಾರಗಳು ನೋಡುಗರ ಗಮನ ಸೆಳೆದವು.

## ಮಂಗಳೂರಿನಲ್ಲಿ ಕುಡ್ಲ ಉದ್ಯೋಗ ಮೇಳ 2026: 850ಕ್ಕೂ ಹೆಚ್ಚು ಹುದ್ದೆ




ಮಂಗಳೂರು : ಮಂಗಳೂರು ಮತ್ತು ಸುತ್ತಮುತ್ತಲಿನ ಪ್ರದೇಶದ ಯುವಜನತೆ ಎದುರಿಸುತ್ತಿರುವ ನಿರುದ್ಯೋಗ ಸಮಸ್ಯೆಗೆ ಸ್ಪಂದಿಸುವ ನಿಟ್ಟಿನಲ್ಲಿ ಕರ್ನಾಟಕ ಜೋಗಿ ಸಮಾಜ ಸುಧಾರಕ ಸಂಘದ (ರಿ) ವತಿಯಿಂದ ಬರುವ ಸೆಪ್ಟೆಂಬರ್ 20, 2026 ರಂದು 'ಕುಡ್ಲ ಉದ್ಯೋಗ ಮೇಳ 2026' ಅನ್ನು ಆಯೋಜಿಸಲಾಗಿದೆ ಎಂದು ಕಾರ್ಯದರ್ಶಿ ಶ್ರೀಯೋಗಿ ವರದರಾಜ್ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು. ಕಳೆದ 56 ವರ್ಷಗಳಿಂದ ಧಾರ್ಮಿಕ, ಸಾಮಾಜಿಕ, ಶೈಕ್ಷಣಿಕ ಹಾಗೂ ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಈ ಸಂಸ್ಥೆಯು ಉದ್ಯೋಗಾಕಾಂಕ್ಷಿಗಳನ್ನು ಮತ್ತು ಉದ್ಯೋಗದಾತರನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸುವ ಶ್ರೇಷ್ಠ ಕಾರ್ಯಕ್ಕೆ ಮುಂದಾಗಿದೆ ಎಂದರು. ಈ ಉದ್ಯೋಗ ಮೇಳವು ಯಾವುದೇ ನಿರ್ದಿಷ್ಟ ಸಮುದಾಯಕ್ಕೆ ಸೀಮಿತವಾಗಿರದೆ, ತಮ್ಮ ಶಿಕ್ಷಣವನ್ನು ಪೂರ್ಣಗೊಳಿಸಿರುವ ಪ್ರತಿಯೊಬ್ಬ ಅರ್ಹ ಅಭ್ಯರ್ಥಿಗೂ ಸಂಪೂರ್ಣ ಉಚಿತವಾಗಿ ತೆರೆದಿರುತ್ತದೆ. ಈ ಉದ್ಯೋಗ ಮೇಳದಲ್ಲಿ ಪಾಲ್ಗೊಳ್ಳಲು ಆನ್‌ಲೈನ್ ಲಿಂಕ್ ಮೂಲಕ ನೋಂದಾಯಿಸಿಕೊಳ್ಳಲು ಅವಕಾಶ ನೀಡಲಾಗಿದ್ದು, ಈಗಾಗಲೇ 750ಕ್ಕೂ ಹೆಚ್ಚು ಅಭ್ಯರ್ಥಿಗಳು ತಮ್ಮ ಹೆಸರನ್ನು ನೋಂದಾಯಿಸಿಕೊಂಡಿದ್ದಾರೆ.

## ಸೆ.23ಕ್ಕೆ ತುಳುವ ಮಹಾಸಭೆಯ ವಿಶೇಷ ಸಭೆ




ಮಂಗಳೂರು: ತುಳು ಭಾಷೆ, ಸಾಹಿತ್ಯ, ಕಲೆ ಹಾಗೂ ಸಾಂಸ್ಕೃತಿಕ ಸಂಘಟನೆಯಲ್ಲಿ ಪ್ರಮುಖ ಪಾತ್ರ ವಹಿಸಿರುವ 'ತುಳುವ ಮಹಾಸಭೆ' ತನ್ನ 98 ವರ್ಷಗಳ ಐತಿಹಾಸಿಕ ಪಯಣದ ನೆನಪಿಗಾಗಿ 2026ರ ಸೆಪ್ಟೆಂಬರ್ 23 ರಂದು ವಿಶೇಷ ಸಭೆಯನ್ನು ಆಯೋಜಿಸಲು ನಿರ್ಧರಿಸಿದೆ. 1928ರ ಸೆಪ್ಟೆಂಬರ್ 23ರಂದು ಆರಂಭಗೊಂಡ ಈ ಸಂಸ್ಥೆಯು ಪ್ರಸ್ತುತ ಶತಮಾನೋತ್ಸವದ ಹಾದಿಯಲ್ಲಿದ್ದು, ಇದರ ಅಂಗವಾಗಿ ಜಾಗತಿಕ ಮಟ್ಟದ ಎಲ್ಲಾ ವಲಯ, ಜಿಲ್ಲಾ, ರಾಜ್ಯ ಹಾಗೂ ಅಂತರ ರಾಷ್ಟ್ರೀಯ ಘಟಕಗಳಲ್ಲಿ "ತುಳುವ ಮಹಾಸಭೆ –98 ವರ್ಷಗಳ ನಡೆದುಬಂದ ದಾರಿ" ಶೀರ್ಷಿಕೆಯಡಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ 'ತುಳುವ ಮಹಾಸಭೆ ಇಂಟರ್‌ನ್ಯಾಷನಲ್' ಕರೆ ನೀಡಿದೆ. ಸಭೆಯಲ್ಲಿ ಸಂಸ್ಥೆಯ ಸ್ಥಾಪನೆಯ ಮೂಲ ಉದ್ದೇಶಗಳು, ಇಲ್ಲಿಯವರೆಗಿನ ಪ್ರಮುಖ ಸಾಧನೆಗಳು ಹಾಗೂ ಮುಂದಿನ ಕಾರ್ಯಯೋಜನೆಗಳ ಕುರಿತು ಸಮಗ್ರ ಚರ್ಚೆ ನಡೆಯಲಿದೆ. ಸಂಸ್ಥೆಯ ಇತಿಹಾಸವನ್ನು ದಾಖಲಿಸುವುದು ಮತ್ತು ಮುಂದಿನ ಪೀಳಿಗೆಗೆ ಸಾಂಸ್ಕೃತಿಕ ಪರಂಪರೆಯನ್ನು ಪರಿಚಯಿಸುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ.

## ಬಿ. ರಮಾನಾಥ ರೈ 75ರ ಸಂಭ್ರಮ: ಲಾಂಛನ ಬಿಡುಗಡೆ



ಬಂಟ್ವಾಳ: ಬೆಳ್ಳಿಪ್ಪಾಡಿ ರಮಾನಾಥ ರೈ ಹುಟ್ಟುಹಬ್ಬ ಆಚರಣಾ ಸಮಿತಿ ವತಿಯಿಂದ ಮಾಜಿ ಸಚಿವ ಬಿ. ರಮಾನಾಥ ರೈ ಅವರ 75ರ ಸಂಭ್ರಮ ಹಾಗೂ ಲಾಂಛನ ಬಿಡುಗಡೆ ಕಾರ್ಯಕ್ರಮವು ಬಿ.ಸಿ. ರೋಡಿನ ಅಂಬೇಡ್ಕರ್ ಭವನದಲ್ಲಿ ನಡೆಯಿತು. ಕಾರ್ಯಕ್ರಮದಲ್ಲಿ ಹುಟ್ಟುಹಬ್ಬ ಆಚರಣಾ ಸಮಿತಿ ಅಧ್ಯಕ್ಷ ಚಂದ್ರಪ್ರಕಾಶ್ ಶೆಟ್ಟಿ ತುಂಬೆ ಮಾತನಾಡಿ, ರಮಾನಾಥ ರೈ ಅವರು ಯಾವುದೇ ಜಾತಿ, ಮತ, ಧರ್ಮದ ಭೇದವಿಲ್ಲದೆ ಸರ್ವರ ನೋವು ನಲಿವುಗಳಿಗೆ ಸ್ಪಂದಿಸುವ ಮೂಲಕ ಬ್ರಹ್ಮಶ್ರೀ ನಾರಾಯಣ ಗುರುಗಳ ತತ್ವ ಸಿದ್ಧಾಂತಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಬಂದ ಮಹಾನ್ ವ್ಯಕ್ತಿ ಎಂದರು. ಅಧಿಕಾರ ಇದ್ದರೂ ಇಲ್ಲದಿದ್ದರೂ ಸದಾ ಜನಸೇವೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡ ಅಪರೂಪದ ರಾಜಕಾರಣಿಯಾಗಿರುವ ಇಂತಹವರ ಸೇವೆ ಇನ್ನೂ ಹಲವಾರು ವರ್ಷ ಜನರಿಗೆ ಸಿಗುವಂತಾಗಲಿ ಎಂದು ಶುಭ ಹಾರೈಸಿದರು. ಈ ವರ್ಷ ಸಮಿತಿಯ ವತಿಯಿಂದ ರಮಾನಾಥ ರೈ ಅವರ 75ನೇ ಹುಟ್ಟುಹಬ್ಬವನ್ನು ವಿಶಿಷ್ಟ ಹಾಗೂ ವಿಜೃಂಭಣೆಯಿಂದ ಆಚರಿಸಲು ಉದ್ದೇಶಿಸಲಾಗಿದ್ದು, ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

## ಎಸ್‌ಡಿಎಂ 'ಆರೋಹಮ್–2026': ಆಳ್ವಾಸ್‌ಗೆ ಸಮಗ್ರ ಚಾಂಪಿಯನ್‌ಶಿಪ್



ಮೂಡುಬಿದಿರೆ: ರಾಜ್ಯದ 37 ಕಾಲೇಜುಗಳಿಂದ ಆಗಮಿಸಿದ್ದ ಸುಮಾರು 1,350 ಸ್ಪರ್ಧಾರ್ಥಿಗಳು ಭಾಗವಹಿಸಿದ್ದ ಪ್ರತಿಷ್ಠಿತ ಅಂತರ್ ಕಾಲೇಜು ಶೈಕ್ಷಣಿಕ ಹಾಗೂ ಸಾಂಸ್ಕೃತಿಕ ಸ್ಪರ್ಧೆ 'ಎಸ್‌ಡಿಎಂ ಆರೋಹಮ್–2026'ರಲ್ಲಿ ಮೂಡುಬಿದಿರೆಯ ಆಳ್ವಾಸ್ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ಸಮಗ್ರ ಚಾಂಪಿಯನ್‌ಶಿಪ್‌ನೊಂದಿಗೆ ನಗದು ಬಹುಮಾನವನ್ನು ಗೆದ್ದು ಸಾಧನೆ ಮೆರೆದಿದ್ದಾರೆ. ಕಾಲೇಜಿನ ವಾಣಿಜ್ಯ ಹಾಗೂ ಕಲಾ ವಿಭಾಗದ ವಿದ್ಯಾರ್ಥಿಗಳು ಸ್ಪರ್ಧೆಯ ವಿವಿಧ ವಿಭಾಗಗಳಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿ ಒಟ್ಟು ನಾಲ್ಕು ಪ್ರಥಮ ಹಾಗೂ ಎರಡು ದ್ವಿತೀಯ ಸ್ಥಾನಗಳನ್ನು ತಮ್ಮದಾಗಿಸಿಕೊಂಡಿದ್ದಾರೆ. ವಿಜೇತ ವಿದ್ಯಾರ್ಥಿಗಳಿಗೆ ಕಾಲೇಜಿನ ಉಪನ್ಯಾಸಕರಾದ ರಶ್ಮಿನ್ ತನ್ವೀರ್, ಅಕ್ಷತಾ ಜೈನ್, ಪುಷ್ಪಲತಾ ಪಿ.ಡಿ. ಹಾಗೂ ಪ್ರಫುಲ್ಲ ಶೆಟ್ಟಿ ತರಬೇತಿ ಮತ್ತು ಮಾರ್ಗದರ್ಶನ ನೀಡಿದ್ದರು. ವಿದ್ಯಾರ್ಥಿಗಳ ಈ ಸಾಧನೆಯನ್ನು ಕಾಲೇಜಿನ ವಾಣಿಜ್ಯ ವಿಭಾಗದ ಡೀನ್ ಪ್ರಶಾಂತ್ ಎಮ್‌ಡಿ ಹಾಗೂ ಉಪನ್ಯಾಸಕ ವೃಂದದವರು ಪ್ರಶಂಸಿಸಿ ಅಭಿನಂದಿಸಿದ್ದಾರೆ.

## ಮಡಿಯಾಲದಲ್ಲಿ ಎಐ ಅಧ್ಯಯನ ಕೇಂದ್ರ: ಸದ್ಗುರು ಶ್ರೀ ಮಧುಸೂದನ ಸಾಯಿ



ಮಂಗಳೂರು: ಲೋಕಸೇವಾ ವೃಂದದ ಸಂಸ್ಥಾಪಕರಾದ ಮಡಿಯಾಲ ನಾರಾಯಣ ಭಟ್ಟರ ಹುಟ್ಟೂರಾದ ಮಡಿಯಾಲ ಗ್ರಾಮದಲ್ಲಿ ಇದೇ ನವೆಂಬರ್‌ನಲ್ಲಿ ಕೃತಕ ಬುದ್ಧಿಮತ್ತೆ ಉನ್ನತ ಶಿಕ್ಷಣ ಕೇಂದ್ರ (ಆರ್ಟಿಫಿಷಿಯಲ್ ಇಂಟೆಲಿಜೆನ್ಸ್–ಎಐ) ಕಾರ್ಯಾರಂಭ ಮಾಡಲಿದೆ. ಜೂನ್ 2027ರಿಂದ ವಿದ್ಯಾರ್ಥಿಗಳ ಸೇರ್ಪಡೆಗೆ ಅವಕಾಶ ಇರಲಿದೆ ಎಂದು 'ಒನ್‌ವರ್ಲ್ಡ್‌ಒನ್ ಫ್ಯಾಮಿಲಿ ಮಿಷನ್' ಸಂಸ್ಥಾಪಕ ಸದ್ಗುರು ಶ್ರೀ ಮಧುಸೂದನ ಸಾಯಿ ಘೋಷಿಸಿದರು. ನಗರದಲ್ಲಿ ನಡೆದ 'ದಿವ್ಯಸಂಜೆ' ಸಂವಾದ ಕಾರ್ಯಕ್ರಮದಲ್ಲಿ ಖ್ಯಾತ ಉದ್ಯಮಿ ಉಲ್ಲಾಸ್ ಕಾಮತ್ ಅವರ ಪ್ರಶ್ನೆಗಳಿಗೆ ಉತ್ತರಿಸಿದ ಅವರು, ಮಡಿಯಾಲ ನಾರಾಯಣ ಭಟ್ಟರ ಜನ್ಮ ಶತಮಾನೋತ್ಸವ ವರ್ಷದಲ್ಲಿ ಬಂಟ್ವಾಳ ತಾಲೂಕಿನ ಅವರ ಹುಟ್ಟೂರಿನಲ್ಲಿ ಈ ಮಹತ್ವದ ಉಪಕ್ರಮ ಆರಂಭಿಸಲಾಗಿದೆ ಎಂದರು. ಮಂಗಳೂರಿನಲ್ಲಿ ಕೃತಕ ಬುದ್ಧಿಮತ್ತೆ, ಮಷಿನ್ ಲರ್ನಿಂಗ್ ಮತ್ತು ಕಂಪ್ಯೂಟರ್ ಶಿಕ್ಷಣಕ್ಕೆ ಒತ್ತು ಕೊಡುವ ಉನ್ನತ ಶಿಕ್ಷಣ ಕೇಂದ್ರ ಆರಂಭಿಸುತ್ತಿದ್ದು ಇದು ಭಾರತದ ಸನಾತನ ಜ್ಞಾನ ಪರಂಪರೆಯ ಭಾಗವೇ ಆಗಿದೆ ಎಂದರು.

# ಸುದ್ದಿ ತುಣುಕು

ಮೂರು ಸಾವಿರ ಮಠದಿಂದ ದಾನವಾಗಿ ನೀಡಲಾದ ಭೂಮಿಯಲ್ಲಿ 50 ಎಕರೆ ಪ್ರದೇಶದಲ್ಲಿ ನಿರ್ಮಿಸಲಾಗಿರುವ ಸಮಗ್ರ ವೈದ್ಯಕೀಯ ಕ್ಯಾಂಪಸ್‌ಗೆ ಸುಮಾರು 700 ಕೋಟಿ ರೂ. ಹೂಡಿಕೆ ಮಾಡಲಾಗಿದೆ ಎಂದು ಪ್ರಭಾಕರ್ ಕೋರೆ ತಿಳಿಸಿದರು.

ಸಚಿವ ಎನ್. ಚಲುವರಾಯಸ್ವಾಮಿ ಅವರು ತುಮಕೂರಿನ ಗುಬ್ಬಿ ತಾಲೂಕಿನ ಕಂಚಿಗಾನ ಹಳ್ಳಿಯಲ್ಲಿ ನಡೆಯುತ್ತಿರುವ ಎತ್ತಿನಹೊಳೆ ಯೋಜನೆಯ 'ಪ್ಯಾಕೇಜ್ 11'ರ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ರಾಹುಲ್ ಗಾಂಧಿ ಅವರು 10 ವರ್ಷಗಳ ಹಿಂದೆ PAY TM ಅಂದ್ರೆ ಅದು ಡೈರೆಕ್ಟ್ಲಿ ಪೇ ಟು ಮೋದಿ ಅಂತ ಹೇಳಿದ್ರು ಎಂದು ಸಚಿವ ಡಾ. ಅಜಯ್ ಧರಂಸಿಂಗ್ ಲೇವಡಿ ಮಾಡಿದರು.

ಬೆಳಗಾವಿ ಜಿಲ್ಲೆಯ ಎರಡ್ಮೂರು ತಾಲೂಕು ಬಿಟ್ಟರೆ ಎಲ್ಲಾ ತಾಲೂಕುಗಳು ಬರ ಪೀಡಿತ ಪಟ್ಟಿಯಲ್ಲಿ ಸ್ಥಾನ ಪಡೆಯಲಿವೆ" ಎಂದು ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ಭಟ್ಕಳದಲ್ಲಿ ಗಣೇಶ ವಿಸರ್ಜನಾ ಮೆರವಣಿಗೆ ವೇಳೆ ಕಲ್ಲು ತೂರಾಟ ನಡೆದಿದ್ದು, ಈ ಕುರಿತು ದೂರು – ಪ್ರತಿ ದೂರು ದಾಖಲಾಗಿದೆ.

ಗಾಳಿಪಟ ತೆಗೆಯಲು ಹೋಗಿ ವಿದ್ಯುತ್ ಸ್ಪರ್ಶದಿಂದ ಮೃತಪಟ್ಟ 11 ವರ್ಷದ ಬಾಲಕನ ಪೋಷಕರಿಗೆ 10.52 ಲಕ್ಷ ಪರಿಹಾರ ನೀಡುವಂತೆ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಗೆ ಹೈಕೋರ್ಟ್ ಆದೇಶಿಸಿದೆ.

ದಕ್ಷಿಣ ಕನ್ನಡ ಜಿಲ್ಲೆಯ ವಿವಿಧ ನ್ಯಾಯಾಲಯಗಳಲ್ಲಿ ಬಾಕಿ ಇರುವ ಹಾಗೂ ನ್ಯಾಯಾಲಯಕ್ಕೆ ಸಲ್ಲಿಕೆಯಾಗದ ಪೂರ್ವ ವ್ಯಾಜ್ಯ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಪರಸ್ಪರ ಸೌಹಾರ್ದಯುತವಾಗಿ ಇತ್ಯರ್ಥಪಡಿಸಿಕೊಳ್ಳಲು ಜಿಲ್ಲಾದ್ಯಂತ 'ರಾಷ್ಟ್ರೀಯ ಲೋಕ್ ಅದಾಲತ್' ಆಯೋಜಿಸಲಾಗಿದೆ.

ಭೂಮಿ ಅ ಖರಾಬ್ ತೆಗೆಯಲು ಒಂದು ಕೋಟಿ ರೂಪಾಯಿ ಹಣಕ್ಕೆ ಬೇಡಿಕೆ ಇಟ್ಟು ಮುಂಗಡವಾಗಿ 50 ಲಕ್ಷ ಲಂಚ ಪಡೆಯುವಾಗ ಧಾರವಾಡ ತಹಶೀಲ್ದಾರ್ ಲೋಕಾ ಬಲೆಗೆ ಬಿದ್ದಿದ್ದಾರೆ.

ಚಿತ್ರರಂಗಕ್ಕೆ ನೀಡಿದ ಅಪಾರ ಕೊಡುಗೆ ಹಿನ್ನೆಲೆ, ಕನ್ನಡದ ಅತ್ಯಂತ ಜನಪ್ರಿಯ ನಟ ಅನಂತ್ ನಾಗ್ ಅವರು 2024ನೇ ಸಾಲಿನ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಹಿರಿಯ ನಟ ತಮ್ಮ ಈ ಪ್ರತಿಷ್ಠಿತ ಪ್ರಶಸ್ತಿಯನ್ನು ಕರ್ನಾಟಕದ ಜನತೆಗೆ ಅರ್ಪಿಸಿದ್ದಾರೆ.

ಬಿಬಿಎಂಪಿ ವ್ಯಾಪ್ತಿಯಲ್ಲಿ ಶಾಪಿಂಗ್ ಮಾಲ್ ನಡೆಸುತ್ತಿರುವ ಕಾರಣಕ್ಕೆ ಮಾತ್ರ ಅದರ ಮಾಲೀಕರು ಡೀಸೆಲ್ ಜನರೇಟರ್ ಸೆಟ್‌ಗೆ ಟ್ರೇಡ್ ಲೈಸೆನ್ಸ್ ಪಡೆಯಬೇಕಾಗಿಲ್ಲ ಎಂದು ಹೈಕೋರ್ಟ್ ತಿಳಿಸಿದೆ.


ನ್ಯಾಯಾಲಯದ ಕಲಾಪಕ್ಕೆ ಪದೇ ಪದೇ ಅಡ್ಡಿಪಡಿಸಿದ ಆರೋಪದ ಮೇಲೆ ವಕೀಲರೊಬ್ಬರಿಗೆ ಒಂದು ದಿನದ ಸರಳ ಜೈಲು ಶಿಕ್ಷೆ ಮತ್ತು 2 ಸಾವಿರ ರೂ. ದಂಡ ವಿಧಿಸಿ ಹೈಕೋರ್ಟ್ ಆದೇಶಿಸಿದೆ.

ರಾಜ್ಯ ಸರ್ಕಾರ ವಂದೇ ಮಾತರಂ ಗೀತೆ ಹಾಡಲು ಅವಕಾಶ ನೀಡಲಿ, ನೀಡದಿರಲಿ ನಾವು ಗೀತೆಯನ್ನು ಹಾಡುತ್ತೇವೆ ಎಂದು ವಿಶ್ವ ಹಿಂದೂ ಪರಿಷತ್ ರಾಷ್ಟ್ರೀಯ ಕಾರ್ಯದರ್ಶಿ ಗೋಪಾಲ್ ಜಿ ಹೇಳಿದರು.

ಬಿಜೆಪಿಗರು ರಣಹದ್ದುಗಳು, ಅವರು ಕೋಮುವಾದ ಸೃಷ್ಟಿಸಲು ಕಾಯುತ್ತಿರುತ್ತಾರೆ ಎಂದು ಸಚಿವ ಯತೀಂದ್ರ ಸಿದ್ದರಾಮಯ್ಯ ಹೇಳಿದರು.

ರಾಜ್ಯದ ಬರಪೀಡಿತ ತಾಲೂಕುಗಳ ರೈತರ ಸಂಕಷ್ಟಕ್ಕೆ ಸರ್ಕಾರ ಸ್ಪಂದಿಸಿದ್ದು, ಬ್ಯಾಂಕಿಂಗ್ ಸಾಲ ಮರುಪಾವತಿಯಲ್ಲಿ ವಿನಾಯಿತಿ ಘೋಷಣೆ ಮಾಡಿದೆ.

# ಚಿಕನ್ ಸುಕ್ಕ



**ಬೇಕಾಗುವ ಸಾಮಾಗ್ರಿಗಳು:**
1 ಕೆಜಿ ಚಿಕನ್, 2 ಚಮಚ ದನಿಯಾ, 1/2 ಚಮಚ ಮೆಂತೆ, ಚಿಟಿಕೆಯಷ್ಟು ಅರಿಶಿಣ ಪುಡಿ, 1 ಚಮಚ ಕರಿಮೆಣಸು, 1 ಚಮಚ ಜೀರಿಗೆ, 1 ಚಮಚ ಗಸಗಸೆ ,5 ಬೆಳ್ಳುಳ್ಳಿ ಎಸಳು, ಹುರಿದ ಬ್ಯಾಡಗಿ ಮೆಣಸಿನ ಕಾಯಿ–10, ತುರಿದ ತೆಂಗಿನ ಕಾಯಿ ಒಂದು ಕಪ್, ಸ್ವಲ್ಪ ಕರಿ ಬೇವಿನ ಎಲೆ, ಈರುಳ್ಳಿ 2, ತುಪ್ಪ 2 ಚಮಚ, ಉಪ್ಪು ರುಚಿಗೆ ತಕ್ಕಷ್ಟು.

**ಮಾಡುವ ವಿಧಾನ :**
ಮೊದಲಿಗೆ ಬಾಣಲೆಯಲ್ಲಿ ತುಪ್ಪ ಹಾಕಿ ಬಿಸಿ ಮಾಡಿ ಅದರಲ್ಲಿ ಕರಿಮೆಣಸು, ಮೆಂತೆ, ಕೊತ್ತಂಬರಿ ಬೀಜ, ಗಸಗಸೆ, ಜೀರಿಗೆ, ಹಾಕಿ ಹುರಿದು ತಣ್ಣಗಾದ ನಂತರ ಮೆಣಸಿನ ಕಾಯಿ ಮತ್ತು ಅರಿಶಿಣ ಹಾಕಿ ಪುಡಿ ಮಾಡಬೇಕು. ನಂತರ ಈ ಪುಡಿಯನ್ನು ಚಿಕನ್ ಜೊತೆ ಮಿಶ್ರ ಮಾಡಿ ರುಚಿಗೆ ತಕ್ಕ ಉಪ್ಪು ಹಾಕಿ ಕಡಿಮೆ ಉರಿಯಲ್ಲಿ 4 ರಿಂದ 5 ನಿಮಿಷ ಬೇಯಿಸಿ ನಂತರ ತೆಂಗಿನ ಕಾಯಿ ತುರಿ ಹಾಕಿ, ಪಾತ್ರೆಯ ಬಾಯಿ ಮುಚ್ಚಿ ಮತ್ತೆ 4–5 ನಿಮಿಷ ಚಿಕನ್‌ನ್ನು ಬೇಯಿಸಬೇಕು. ಈಗ ಬಾಣಲೆಯನ್ನು ಬಿಸಿ ಮಾಡಿ ಅದಕ್ಕೆ ತುಪ್ಪ ಹಾಕಿ ಅದರಲ್ಲಿ ಕರಿಬೇವಿನ ಎಲೆ ಮತ್ತು ಕತ್ತರಿಸಿದ ಈರುಳ್ಳಿ ಹಾಕಿ, ಈರುಳ್ಳಿ ಕಂದು ಬಣ್ಣಕ್ಕೆ ಬರುವವರೆಗೆ ಹುರಿದು ಅದನ್ನು ತಯಾರಾದ ಚಿಕನ್ ಜೊತೆ ಹಾಕಿ ಮಿಶ್ರ ಮಾಡಿದರೆ ರುಚಿಕರವಾದ ಚಿಕನ್ ಸುಕ್ಕ ಸವಿಯಲು ಸಿದ್ಧ.

# ಕಂಗಾಲಾದ 'ಇಸ್ಲಾಮಿಕ್ ನ್ಯಾಟೋ'



ಸೌದಿ ಅರೇಬಿಯಾ : ಸೌದಿ ಅರೇಬಿಯಾ, ಟರ್ಕಿ ಮತ್ತು ಪಾಕಿಸ್ತಾನ ಸೇರಿ ರಚಿಸಿಕೊಂಡ 'ಮೆಕ್ಕಾ ಒಪ್ಪಂದ' ಅಥವಾ 'ಇಸ್ಲಾಮಿಕ್ ನ್ಯಾಟೋ' ರಕ್ಷಣಾ ಮೈತ್ರಿಕೂಟವು ತನ್ನ ಮೊದಲ ಪರೀಕ್ಷೆಯಲ್ಲೇ ಸಂಪೂರ್ಣವಾಗಿ ವಿಫಲಗೊಂಡಿದೆ. ಸೌದಿ ಅರೇಬಿಯಾ ವಿರುದ್ಧ ಹೌತಿ ಬಂಡುಕೋರರ ಸಂಘರ್ಷ ತೀವ್ರಗೊಂಡಿದ್ದು, ಸಂಕಷ್ಟದ ಸಮಯದಲ್ಲಿ ಪಾಕಿಸ್ತಾನ ಮತ್ತು ಟರ್ಕಿ ಯಾವುದೇ ಪ್ರತ್ಯಕ್ಷ ಸೇನಾ ನೆರವು ನೀಡದೆ ಕೇವಲ ಹೇಳಿಕೆಗಳಿಗೆ ಸೀಮಿತವಾಗಿವೆ. ಒಪ್ಪಂದ ಪ್ರಕಾರ, ಸೌದಿ ಅರೇಬಿಯಾ ಮೇಲಿನ ದಾಳಿಯನ್ನು ತಮ್ಮ ಮೇಲಿನ ದಾಳಿ ಎಂದು ಪರಿಗಣಿಸಿ ಪಾಕಿಸ್ತಾನ ಮತ್ತು ಟರ್ಕಿ ತಕ್ಷಣವೇ ಸೌದಿಯ ನೆರವಿಗೆ ಧಾವಿಸಬೇಕಿತ್ತು.

# ಗಣೇಶೋತ್ಸವ ಆಚರಿಸಿದ ಬಾಂಗ್ಲಾ ಕ್ರಿಕೆಟಿಗ

ಢಾಕಾ: ಬಾಂಗ್ಲಾದೇಶ ಕ್ರಿಕೆಟ್ ತಂಡದ ಪ್ರಮುಖ ಆಟಗಾರ ಲಿಟನ್ ದಾಸ್ ಧರ್ಮಕ್ಕಿಂತ ಶ್ರದ್ಧೆ ಮತ್ತು ಭಕ್ತಿಯೇ ಮಿಗಿಲು ಎಂಬುದನ್ನು ಸಾಬೀತುಪಡಿಸಿದ್ದಾರೆ. ತಮ್ಮ ಕುಟುಂಬಕ್ಕೆ ಎದುರಾದ ಭದ್ರತಾ ಕಳವಳಗಳನ್ನು ಲೆಕ್ಕಿಸದ ಲಿಟನ್ ದಾಸ್, ಪತ್ನಿ ದೇಬೋಶ್ರೀ ಸೋಂಚಿತಾ ಹಾಗೂ ಮಗಳೊಂದಿಗೆ ನಿವಾಸದಲ್ಲೇ ಅತ್ಯಂತ ಶ್ರದ್ಧೆಯಿಂದ ಶ್ರೀ ಗಣೇಶ ಮೂರ್ತಿಯನ್ನು ಪ್ರತಿಷ್ಠಾಪಿಸಿ ಪೂಜೆ ಸಲ್ಲಿಸಿದ್ದಾರೆ. ವಿಘ್ನನಿವಾರಕನ ಮೂರ್ತಿಯನ್ನು ವಿವಿಧ ವರ್ಣರಂಜಿತ ಹೂವುಗಳಿಂದ



ಸುಂದರವಾಗಿ ಅಲಂಕರಿಸಿ, ಮೋದಕ ಮತ್ತು ಫಲ–ವಸ್ತುಗಳ ನೈವೇದ್ಯ ಅರ್ಪಿಸಿ ಗಣೇಶ ಚತುರ್ಥಿಯನ್ನು ಆಚರಿಸಿದ್ದಾರೆ.

# ಕಲಾಂಗೆ ಸಸ್ಯಾಹಾರಿ ಊಟ ಬಡಿಸಿದ್ದನ್ನು ನೆನಪಿಸಿಕೊಂಡ ಐಸ್‌ಲ್ಯಾಂಡ್ ಮಾಜಿ ಅಧ್ಯಕ್ಷ!



ಐಸ್‌ಲ್ಯಾಂಡ್ : ನವದೆಹಲಿಯಲ್ಲಿ ನಡೆದ ಬ್ರಿಕ್ಸ್ ಶೃಂಗಸಭೆಯ ರಾಜತಾಂತ್ರಿಕ ಔತಣಕೂಟದಲ್ಲಿ ಸಂಪೂರ್ಣ ಸಸ್ಯಾಹಾರಿ ಮೆನು ಬಡಿಸಿರುವುದಕ್ಕೆ ದೇಶದ ವಿರೋಧ ಪಕ್ಷಗಳಿಂದ ಟೀಕೆಗಳು ವ್ಯಕ್ತವಾಗುತ್ತಿರುವ ಬೆನ್ನಲ್ಲೇ, ಐಸ್‌ಲ್ಯಾಂಡ್‌ನ ಮಾಜಿ ಅಧ್ಯಕ್ಷ ಓಲಾಫರ್ ರಾಗ್ನರ್ ಗ್ರಿಮ್ಸನ್ 2005ರ ಅಪರೂಪದ ಪ್ರಸಂಗವೊಂದನ್ನು ನೆನಪಿಸಿಕೊಂಡಿದ್ದಾರೆ. ಭಾರತದ ಅಂದಿನ ರಾಷ್ಟ್ರಪತಿ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಅವರು ಐಸ್‌ಲ್ಯಾಂಡ್‌ಗೆ ನೀಡಿದ್ದ ಐತಿಹಾಸಿಕ ಭೇಟಿಯ ಸಮಯದಲ್ಲಿ, ತಾವು ಕೂಡ ಸಂಪೂರ್ಣ ಸಸ್ಯಾಹಾರಿ ರಾಜತಾಂತ್ರಿಕ ಔತಣಕೂಟವನ್ನೇ ಆಯೋಜಿಸಿದ್ದಾಗಿ ಅವರು ತಿಳಿಸಿದ್ದಾರೆ.

# ಬ್ರಿಕ್ಸ್ ಶಕ್ತಿ ವೃದ್ಧಿ ನಡುವೆಯೇ ಭಾರತಕ್ಕೆ ಬಿಗ್ ಶಾಕ್

ನ್ಯೂಯೋರ್ಕ್ : ಬ್ರಿಕ್ಸ್ ಶೃಂಗಸಭೆಯ ಯಶಸ್ಸು ಮತ್ತು ಜಾಗತಿಕ ದಕ್ಷಿಣದ ದೇಶಗಳಲ್ಲಿ ಹೆಚ್ಚುತ್ತಿರುವ ಒಗ್ಗಟ್ಟು ಅಮೆರಿಕವನ್ನು ಕಂಗಾಲುಗೊಳಿಸಿದೆ. ಭಾರತದ ನೇತೃತ್ವದಲ್ಲಿ ಉದಯೋನ್ಮುಖ ಆರ್ಥಿಕತೆಗಳು ಸ್ವಾವಲಂಬಿ ವ್ಯಾಪಾರಕ್ಕಾಗಿ ಹೊಸ ಹಾದಿ ಕಂಡುಕೊಳ್ಳುತ್ತಿರುವುದಕ್ಕೆ ಪ್ರತಿಯಾಗಿ, ಅಮೆರಿಕದ ವಾಣಿಜ್ಯ ಇಲಾಖೆಯು ಭಾರತ ಸೇರಿದಂತೆ ಏಷ್ಯಾದ ದೇಶಗಳ ವಿರುದ್ಧ ಕಠಿಣ ವಾಣಿಜ್ಯ ನಿರ್ಬಂಧಕ್ಕೆ ಮುಂದಾಗಿದೆ. ಭಾರತ, ಇಂಡೋನೇಷ್ಯಾ ಮತ್ತು ಲಾವೋಸ್‌ನಿಂದ ಆಮದು ಮಾಡಿಕೊಳ್ಳುವ



ಸೌರ ಕೋಶ ಹಾಗೂ ಸೌರ ಫಲಕಗಳ ಮೇಲೆ ಭಾರಿ ಪ್ರಮಾಣದ ಸುಂಕ ವಿಧಿಸಲು ಯುಎಸ್ ರಂಗಸಿದ್ಧತೆ ನಡೆಸಿದೆ.

# ಒಸಾಮಾ ಬಿನ್ ಲಾಡೆನ್ ಮಗ ಹಮ್ಜಾ ಪ್ರತ್ಯಕ್ಷ



ಅಮೇರಿಕ : ಕುಖ್ಯಾತ ಭಯೋತ್ಪಾದಕ ಸಂಘಟನೆ ಅಲ್–ಖೈದಾದ ಪ್ರಚಾರ ವಿಭಾಗ 'ಅಸ್–ಸಹಾಬ್', ಸೆಪ್ಟೆಂಬರ್ 11ರ ಭೀಕರ ಭಯೋತ್ಪಾದಕ ದಾಳಿಯ 25ನೇ ವರ್ಷಾಚರಣೆಯ ಸಂದರ್ಭದಲ್ಲಿ 50 ನಿಮಿಷಗಳ ದೀರ್ಘಾವಧಿಯ ಹೊಸ ವಿಡಿಯೋ ಬಿಡುಗಡೆ ಮಾಡುವ ಮೂಲಕ ಜಾಗತಿಕ ಗುಪ್ತಚರ ಸಂಸ್ಥೆಗಳಿಗೆ ತೀವ್ರ ಆತಂಕವನ್ನುಂಟುಮಾಡಿದೆ. ಸುಮಾರು ಏಳು ವರ್ಷಗಳ ಹಿಂದೆಯೇ ಯುಎಸ್ ಸೇನೆಯ ಕಾರ್ಯಾಚರಣೆಯಲ್ಲಿ ಹತನಾಗಿದ್ದಾನೆ ಎಂದು ವರದಿಯಾಗಿದ್ದ ಒಸಾಮಾ ಬಿನ್ ಲಾಡೆನ್ ಮಗ ಹಮ್ಜಾ ಬಿನ್ ಲಾಡೆನ್‌ನ ಅಭೂತಪೂರ್ವ ದೃಶ್ಯಗಳು ಈ ವಿಡಿಯೋದಲ್ಲಿ ಕಂಡುಬಂದಿರುವುದು ಈ ಆತಂಕಕ್ಕೆ ಮುಖ್ಯ ಕಾರಣವಾಗಿದೆ.

# ಇತಿಹಾಸ ಬರೆದ ಭಾರತದ ಪುರುಷ ಹಾಗೂ ಮಹಿಳಾ ಜೂನಿಯರ್ ಹಾಕಿ ತಂಡ!

ಮೋಕಿ : ಏಷ್ಯನ್ ಹಾಕಿ ಫೆಡರೇಶನ್ ಆಯೋಜನೆಯ ಜೂನಿಯರ್ ಹಾಕಿ ಏಷ್ಯಾ ಕಪ್ ಪಂದ್ಯಾವಳಿಯಲ್ಲಿ ಭಾರತದ ಯುವ ಹಾಕಿ ಪಡೆ ಐತಿಹಾಸಿಕ ಸಾಧನೆ ಮಾಡಿದೆ. ಚೀನಾದ ಮೋಕಿಯಲ್ಲಿ ನಡೆದ ರವಿವಾರದ ರೋಚಕ ಫೈನಲ್ ಪಂದ್ಯಗಳಲ್ಲಿ ಭಾರತದ ಪುರುಷ ಹಾಗೂ ಮಹಿಳಾ ಜೂನಿಯರ್ ತಂಡಗಳು ಅಮೋಘ ಪ್ರದರ್ಶನ ನೀಡಿ, ಸತತ ಮೂರನೇ ಬಾರಿಗೆ ಏಷ್ಯಾ ಕಪ್ ಪ್ರಶಸ್ತಿಯನ್ನು ತಮ್ಮದಾಗಿಸಿಕೊಂಡಿವೆ. ಈ ಭರ್ಜರಿ ಜಯದೊಂದಿಗೆ




ಎರಡೂ ತಂಡಗಳು ಮುಂಬರುವ ಎಫ್‌ಐಎಚ್ (FIH) ಜೂನಿಯರ್ ಹಾಕಿ ವಿಶ್ವಕಪ್‌ಗೆ ಅರ್ಹತೆ ಗಿಟ್ಟಿಸಿಕೊಂಡಿವೆ.

# ಏಷ್ಯಾ ಕಪ್ ಗೆದ್ದ ಭಾರತೀಯ ಮಹಿಳಾ ಕ್ರಿಕೆಟ್ ತಂಡ



ದುಬೈ : ದುಬೈ ಅಂತರರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆದ ಏಷ್ಯಾ ಕಪ್ ಫೈನಲ್ ಪಂದ್ಯದಲ್ಲಿ ಶ್ರೀಲಂಕಾವನ್ನು 72 ರನ್‌ಗಳಿಂದ ಮಣಿಸಿದ ಭಾರತೀಯ ಮಹಿಳಾ ಕ್ರಿಕೆಟ್ ತಂಡವು ಎಂಟನೇ ಬಾರಿಗೆ ಏಷ್ಯಾ ಕಪ್ ಚಾಂಪಿಯನ್ ಆಗಿ ಹೊರಹೊಮ್ಮಿದೆ. ಏಷ್ಯನ್ ಕ್ರಿಕೆಟ್ ಕೌನ್ಸಿಲ್ (ACC) ಅಧ್ಯಕ್ಷ ಹಾಗೂ ಪಾಕಿಸ್ತಾನ ಕ್ರಿಕೆಟ್ ಮಂಡಳಿ (PCB) ಮುಖ್ಯಸ್ಥರಾದ ಮೊಹ್ಸಿನ್ ನಖ್ವಿ ಅವರಿಂದ ಚಾಂಪಿಯನ್ಸ್ ಟ್ರೋಫಿಯನ್ನು ಸ್ವೀಕರಿಸಲು ಭಾರತೀಯ ಮಹಿಳಾ ಆಟಗಾರರು ನಿರಾಕರಿಸಿದ್ದಾರೆ.

# ಸಿಎಸಿಗೆ ತೆಂಡೂಲ್ಕರ್, ದ್ರಾವಿಡ್ ನೇಮಕಕ್ಕೆ ಒತ್ತಾಯ

ಮುಂಬೈ : ಐಪಿಎಲ್ ಯಶಸ್ಸು ಹಾಗೂ ಜಾಗತಿಕ ಕ್ರಿಕೆಟ್‌ನಲ್ಲಿ ಭಾರತೀಯ ತಂಡಗಳ ಅಭೂತಪೂರ್ವ ಪ್ರದರ್ಶನದ ನಡುವೆಯೂ, ಬಿಸಿಸಿಐನ ತಾಂತ್ರಿಕ ಆಡಳಿತ ವ್ಯವಸ್ಥೆಯಲ್ಲಿ ಸುಧಾರಣೆ ತರುವಂತೆ ಭಾರತದ ಮಾಜಿ ನಾಯಕ ಸುನಿಲ್ ಗವಾಸ್ಕರ್ ಮಹತ್ವದ ಸಲಹೆ ನೀಡಿದ್ದಾರೆ. ಸಮಿತಿಗೆ ಸಚಿನ್ ತೆಂಡೂಲ್ಕರ್, ರಾಹುಲ್ ದ್ರಾವಿಡ್, ಸೌರವ್ ಗಂಗೂಲಿ, ರವಿಶಾಸ್ತ್ರಿ, ಅನಿಲ್ ಕುಂಬ್ಳೆ, ಹರ್ಭಜನ್ ಸಿಂಗ್



ಮತ್ತು ವೀರೇಂದ್ರ ಸೆಹ್ವಾಗ್ ಅವರಂತಹ ಏಳು ದಿಗ್ಗಜ ಆಟಗಾರರನ್ನು ಸೇರ್ಪಡೆಗೊಳಿಸಲು ಅವರು ಬಿಸಿಸಿಐಗೆ ಶಿಫಾರಸು ಮಾಡಿದ್ದಾರೆ.

# ಜಲಜೀವನ್ ಮಿಷನ್‌ನಲ್ಲಿ ಕಳಪೆ ಕಾಮಗಾರಿ: ತನಿಖೆಗೆ ಆಗ್ರಹ



ಚಿಕ್ಕಮಗಳೂರು: ರಾಜ್ಯದಲ್ಲಿ ಜಲಜೀವನ್ ಮಿಷನ್ ಯೋಜನೆಯ ಅನುಷ್ಠಾನದಲ್ಲಿ ಗಂಭೀರ ಲೋಪದೋಷಗಳು ಹಾಗೂ ಕಳಪೆ ಕಾಮಗಾರಿಗಳು ನಡೆಯುತ್ತಿದ್ದು, ಇದರಿಂದ ಯೋಜನೆಯ ಮೂಲ ಉದ್ದೇಶವೇ ವಿಫಲ ವಾಗುತ್ತಿದೆ. ಈ ಬಗ್ಗೆ ಸರ್ಕಾರ ತಕ್ಷಣ ಮಧ್ಯ ಪ್ರವೇಶಿಸಿ ಉನ್ನತ ಮಟ್ಟದ ಸಮಗ್ರ ತನಿಖೆ ನಡೆಸಬೇಕು ಎಂದು ವಿಧಾನ ಪರಿಷತ್ ಸದಸ್ಯ ಡಾ. ಸಿ.ಟಿ. ರವಿ ಅವರು ಮುಖ್ಯಮಂತ್ರಿ ಹಾಗೂ ಪ್ರಧಾನಮಂತ್ರಿಗೆ ಪತ್ರ ಬರೆದು ಆಗ್ರಹಿಸಿ ದ್ದಾರೆ. ರಾಜ್ಯದಲ್ಲಿ ಒಟ್ಟು 1,01,30,702 ಗ್ರಾಮೀಣ ಕುಟುಂಬಗಳಿದ್ದು, ಯೋಜನೆಯಡಿ ಇದುವರೆಗೆ 37,901.37 ಕೋಟಿ ವೆಚ್ಚದಲ್ಲಿ 63.74 ಲಕ್ಷಕ್ಕೂ ಹೆಚ್ಚು ಮನೆಗಳಿಗೆ ಹೊಸ ನಳ್ಳಿ ಸಂಪರ್ಕ ಕಲ್ಪಿಸಲಾಗಿದೆ.

# ಕಲ್ಯಾಣ ಕರ್ನಾಟಕದ ಅಪಾರ ಪ್ರವಾಸೋದ್ಯಮ ಸಾಮರ್ಥ್ಯ: ಡಾ. ಶಾಲಿನಿ ರಜನೀಶ್

ಮಂಗಳೂರು: ಕಲ್ಯಾಣ ಕರ್ನಾಟಕ ಪ್ರದೇಶವು ವೈವಿಧ್ಯಮಯ ಇತಿಹಾಸ, ಕಲೆ, ಸಂಸ್ಕೃತಿ, ವಾಸ್ತುಶಿಲ್ಪ ಹಾಗೂ ನೈಸರ್ಗಿಕ ಸೌಂದರ್ಯದಿಂದ ಕೂಡಿದ್ದು, ಅಪಾರ ಪ್ರವಾಸೋದ್ಯಮ ಸಾಮರ್ಥ್ಯವನ್ನು ಹೊಂದಿದೆ ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ತಿಳಿಸಿದ್ದಾರೆ. ಈ ಭಾಗದ ಶ್ರೀಮಂತ



ಸಾಂಸ್ಕೃತಿಕ ಪರಂಪರೆ ಮತ್ತು ಪ್ರವಾಸಿ ಸಾಧ್ಯತೆಗಳನ್ನು ಹಂಚಿಕೊಂಡಿದ್ದಾರೆ. ಕನ್ನಡನಾಡಿನ ಸಾಂಸ್ಕೃತಿಕ ಹಾಗೂ ಐತಿಹಾಸಿಕ ಶ್ರೀಮಂತಿಕೆಯನ್ನು ಅನುಭವಿಸುವುದರ ಜೊತೆಗೆ ಪ್ರವಾಸೋದ್ಯಮದ ಮೂಲಕ ಕಲ್ಯಾಣ ಕರ್ನಾ ಟಕದ ವೈಭವವನ್ನು ಜಗತ್ತಿಗೆ ಪರಿಚಯಿಸಬೇಕು ಎಂದು ಡಾ. ಶಾಲಿನಿ ರಜನೀಶ್ ಕರೆ ನೀಡಿದ್ದಾರೆ.

# ವಿಜಯೇಂದ್ರ ಬದಲಾಗದಿದ್ದರೆ ಬಿಜೆಪಿ ಉದ್ಧಾರವಿಲ್ಲ : ಶಾಸಕ ಯತ್ನಾಳ್

ಬಾಗಲಕೋಟೆ: ರಾಜ್ಯದಲ್ಲಿ ಭಾರತೀಯ ಜನತಾ ಪಕ್ಷ ಉದ್ಧಾರವಾಗಬೇಕಾದರೆ ತಕ್ಷಣವೇ ರಾಜ್ಯಾಧ್ಯಕ್ಷರ ಬದಲಾವಣೆಯಾಗಬೇಕು. ಪ್ರಸ್ತುತ ರಾಜ್ಯಾಧ್ಯಕ್ಷರ ಅವಧಿ ನವೆಂಬರ್ ಅಂತ್ಯಕ್ಕೆ ಮುಕ್ತಾಯಗೊಳ್ಳಲಿದ್ದು, ಇಂತಹ ಅಸಫಲ ನಾಯಕರನ್ನು ಮುಂದುವರಿಸಿದರೆ ಪಕ್ಷ ಉಳಿಯುವುದಿಲ್ಲ ಎಂದು ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಬಾಗಲಕೋಟೆಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರಾಜ್ಯಾಧ್ಯಕ್ಷರ ಬದಲಾವಣೆಯಾದರೆ ತಮಗೆ ಬಿಜೆಪಿಯಲ್ಲಿ ಸಕ್ರಿಯರಾಗುವ ಸಮಯ ಬರಲಿದ್ದು, ಈ ವಿಷಯದ ಕುರಿತು ಇನ್ನೆರಡು ತಿಂಗಳ ಬಳಿಕ ಸೂಕ್ತವಾಗಿ ಮಾತನಾಡುವುದಾಗಿ ಹೇಳಿದರು.



# ಬೆಳೆ ವಿಮೆ, ಕುಡಿಯುವ ನೀರು ಹಾಗೂ ಕೃಷಿ ಸಹಾಯಧನ ಘೋಷಣೆ

ಬೆಂಗಳೂರು : ರಾಜ್ಯದಲ್ಲಿ ಬರ ಪರಿಸ್ಥಿತಿ ತೀವ್ರ ಸ್ವರೂಪ ಪಡೆದುಕೊಂಡಿರುವ ಹಿನ್ನೆಲೆಯಲ್ಲಿ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ರೈತರ ಸಮಸ್ಯೆಗಳ ಪರಿಹಾರಕ್ಕಾಗಿ ವಿಶೇಷ ಆದ್ಯತೆ ನೀಡಿದ್ದಾರೆ. ಅಧಿಕಾರ ವಹಿಸಿಕೊಂಡ ತಕ್ಷಣವೇ ಸಚಿವ ಸಂಪುಟದ ಸಹೋದ್ಯೋಗಿಗಳಿಗೆ ಜಿಲ್ಲಾ ಮಟ್ಟದ ಉಸ್ತುವಾರಿ



ವಹಿಸಿ ಸ್ಥಳದಲ್ಲೇ ಬರ ಪರಿಸ್ಥಿತಿ ಪರಿಶೀಲಿಸಿ ವರದಿ ಸಲ್ಲಿಸುವಂತೆ ಸೂಚಿಸಿದ್ದರು. ಇದರ ಭಾಗವಾಗಿ ತಾವೂ ಸ್ವತಃ ಬಾಗಲಕೋಟೆ, ಬೀದರ್ ಸೇರಿದಂತೆ ಹಲವು ಜಿಲ್ಲೆಗಳಿಗೆ ಭೇಟಿ ನೀಡಿ ರೈತರೊಂದಿಗೆ ನೇರ ಸಂವಾದ ನಡೆಸಿ, ಅವರ ಕುಂದುಕೊರತೆಗಳನ್ನು ಆಲಿಸಿ ಧೈರ್ಯ ತುಂಬುವ ಕಾರ್ಯ ಮಾಡಿದ್ದಾರೆ.

# ಕರ್ನಾಟಕ ಉಚ್ಚನ್ಯಾಯಾಲಯದ ನ್ಯಾಯಮೂರ್ತಿಯಾಗಿ ಉಷಾರಾಣಿ ನೇಮಕ



ಉಜಿರೆ:ಬೆಳ್ತಂಗಡಿ ತಾಲೂಕಿನವರಾದ ಉಷಾರಾಣಿ ಅವರು ಕರ್ನಾಟಕ ಉಚ್ಚನ್ಯಾಯಾಲಯದ ನ್ಯಾಯಮೂರ್ತಿಗಳಾಗಿ ನೇಮಕಗೊಂಡಿದ್ದಾರೆ. ಇದರೊಂದಿಗೆ ಕರ್ನಾಟಕ ಉಚ್ಚನ್ಯಾಯಾಲಯದ ಪ್ರಥಮ ಜೈನ ಮಹಿಳಾ ನ್ಯಾಯಮೂರ್ತಿ ಎಂಬ ಐತಿಹಾಸಿಕ ಕೀರ್ತಿಗೆ ಭಾಜನರಾಗಿದ್ದಾರೆ. ಮೈಸೂರಿನಲ್ಲಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಅವರನ್ನು ಇದೀಗ ಉಚ್ಚನ್ಯಾಯಾಲಯದ ನ್ಯಾಯಮೂರ್ತಿಯನ್ನಾಗಿ ಬಡ್ತಿ ನೀಡಿ ನೇಮಕ ಮಾಡಲಾಗಿದೆ. ಬೆಳ್ತಂಗಡಿಯಲ್ಲಿ ಪ್ರಸಿದ್ಧ ಹಿರಿಯ ವಕೀಲರು ಹಾಗೂ ಸಮಾಜಸೇವಾಕರ್ತರಾಗಿ ಚಿರಪರಿ ಚಿತರಾಗಿದ್ದ ದಿ। ನೇಮಿರಾಜ ಶೆಟ್ಟಿ ಅವರ ಪುತ್ರಿಯಾಗಿದ್ದಾರೆ.

# ಸಚಿವ ಬಸವರಾಜ ರಾಯರೆಡ್ಡಿ ಸರಣಿ ವಿವಾದಾತ್ಮಕ ಹೇಳಿಕೆ: ಕಾಂಗ್ರೆಸ್‌ರಜೆ ತಲೆನೋವು

ಬೆಂಗಳೂರು : ಸಚಿವ ಸ್ಥಾನ ಪಡೆದುಕೊಂಡಿದ್ದರೂ ತಮ್ಮ ಇಲಾಖೆಯ ಅಭಿವೃದ್ಧಿ ಕಾರ್ಯಗಳತ್ತ ಸೂಕ್ತ ಗಮನ ಹರಿಸದೆ, ನಿರಂತರವಾಗಿ ನೀಡುತ್ತಿರುವ ವಿವಾದಾತ್ಮಕ ಹಾಗೂ ಉಡಾಫೆಯ ಹೇಳಿಕೆಗಳ ಮೂಲಕ ಸಚಿವ ಬಸವರಾಜ ರಾಯರೆಡ್ಡಿ ಅವರು ಸರ್ಕಾರ ಹಾಗೂ ಕಾಂಗ್ರೆಸ್ ಪಕ್ಷಕ್ಕೆ ತೀವ್ರ ತಲೆನೋವಾಗಿ ಪರಿಣಮಿಸಿದ್ದಾರೆ



ಎಂಬ ಅಸಮಾಧಾನ ಪಕ್ಷದ ಒಳಗಿನಿಂದಲೇ ಕೇಳಿಬರುತ್ತಿದೆ. ಕಾಮಗಾರಿಗೆ ಮೂರು ಪಟ್ಟು ದುಬಾರಿ ಮೊತ್ತಕ್ಕೆ ಟೆಂಡರ್ ನೀಡಲಾಗುತ್ತಿದ್ದರೂ ಅದನ್ನು ಕಂಡೂ ಕಾಣದಂತಿರುವ ಸಚಿವರು, ಇತರ ಎಲ್ಲಾ ವಿಚಾರಗಳಲ್ಲಿ ಮೂಗು ತೂರಿಸಿ ಹೇಳಿಕೆ ನೀಡುವ ಮೂಲಕ ಗೊಂದಲ ಸೃಷ್ಟಿಸುತ್ತಿದ್ದಾರೆ ಎಂಬ ಆಕ್ಷೇಪಗಳು ವ್ಯಕ್ತವಾಗಿವೆ.

# ರಾಜಸ್ಥಾನ ಸ್ಥಳೀಯ ಸಂಸ್ಥೆ ಚುನಾವಣೆ: ಬಿಜೆಪಿಗೆ ಒಟ್ಟು ಮುನ್ನಡೆ

ರಾಜಸ್ಥಾನ:ರಾಜಸ್ಥಾನದ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಯ ಫಲಿತಾಂಶ ಹೊರ ಬಿದ್ದಿದ್ದು, ಆಡಳಿತಾರೂಢ ಬಿಜೆಪಿ ಪಕ್ಷವು ಕಾಂಗ್ರೆಸ್‌ಗಿಂತ ಸ್ಪಷ್ಟ ಮುನ್ನಡೆ ಸಾಧಿಸಿದೆ. ಒಟ್ಟು ಮತ ಎಣಿಕೆ ನಡೆದ 10,244 ವಾರ್ಡ್‌ಗಳ ಪೈಕಿ 10,204 ವಾರ್ಡ್‌ಗಳ ಫಲಿತಾಂಶ ಪ್ರಕಟವಾಗಿದ್ದು, ಬಿಜೆಪಿ 4,179 ವಾರ್ಡ್‌ಗಳಲ್ಲಿ ಗೆಲುವು ಸಾಧಿಸಿದರೆ, ವಿರೋಧ ಪಕ್ಷವಾದ ಕಾಂಗ್ರೆಸ್ 3,613 ವಾರ್ಡ್‌ಗಳನ್ನು ತನ್ನದಾಗಿಸಿಕೊಂಡಿದೆ. ರಾಜ್ಯದ 10 ಮಹಾ ನಗರ ಪಾಲಿಕೆಗಳ ಪೈಕಿ ನಾಲ್ಕರಲ್ಲಿ ಬಿಜೆಪಿ ಸ್ಪಷ್ಟ ಬಹುಮತ ಪಡೆದುಕೊಂಡಿದೆ. ಇನ್ನುಳಿದಂತೆ ಪಕ್ಷೇತರ ಅಭ್ಯರ್ಥಿಗಳು 2,273 ವಾರ್ಡ್‌ಗಳಲ್ಲಿ ಗೆದ್ದು ಪ್ರಮುಖ ಶಕ್ತಿಯಾಗಿ ಹೊರಹೊಮ್ಮಿದ್ದಾರೆ.



# ಸಹಾರನ್‌ಪುರದಲ್ಲಿ ಬೃಹತ್ ನಕಲಿ ನಾಣ್ಯ ದಂಧೆ ಬಯಲಿಗೆ : ಐವರ ಬಂಧನ

ಉತ್ತರ ಪ್ರದೇಶ : ಉತ್ತರ ಪ್ರದೇಶದ ಸಹರಾನ್‌ಪುರದಲ್ಲಿ ಪೊಲೀಸರು ಬೃಹತ್ ನಕಲಿ ನಾಣ್ಯ ತಯಾರಿಕಾ ಜಾಲವನ್ನು ಯಶಸ್ವಿಯಾಗಿ ಭೇದಿಸಿದ್ದು, ಪ್ರಮುಖ ಆರೋಪಿ ಸೇರಿದಂತೆ ಐವರನ್ನು ಬಂಧಿಸಿದ್ದಾರೆ. ಸಹಾರನ್‌ಪುರದ ಟಿಟಾವಾ ಪ್ರದೇಶದಲ್ಲಿ ಹೊಸದಾಗಿ ಉತ್ಪಾದನಾ ಘಟಕ ಸ್ಥಾಪಿಸಲು ಯಂತ್ರೋಪಕರಣಗಳ



ನ್ನು ಸಾಗಿಸುತ್ತಿದ್ದ ವೇಳೆ ಪೊಲೀಸರು ದಾಳಿ ನಡೆಸಿ ಈ ಕಾರ್ಯಾಚರಣೆ ಮಾಡಿದ್ದಾರೆ. ಉತ್ತರ ಪ್ರದೇಶ, ಪಂಜಾಬ್ ಮತ್ತು ಬಿಹಾರ ರಾಜ್ಯಗಳಲ್ಲಿ ವ್ಯಾಪಕವಾಗಿ ಕಾರ್ಯಾಚರಿಸುತ್ತಿದ್ದ ಈ ಜಾಲವು 2001ರಿಂದಲೂ ನಕಲಿ ನಾಣ್ಯಗಳ ದಂಧೆಯಲ್ಲಿ ತೊಡಗಿತ್ತು ಎಂಬುದು ತನಿಖೆಯಿಂದ ಬೆಳಕಿಗೆ ಬಂದಿದೆ.

# ರಾಜಕೀಯ ಪ್ರಾತಿನಿಧ್ಯ ಮತ್ತು ಹಕ್ಕುಗಳಿಗಾಗಿ ಮುಸ್ಲಿಮರು ಸ್ವತಃ ಧ್ವನಿ ಎತ್ತಬೇಕು!



ಪಟ್ನಾ: ಮುಸ್ಲಿಮರು ಯಾವುದೇ ರಾಜಕೀಯ ಪಕ್ಷದ ಕುರುಡು ಹಿಂಬಾಲಕರಾಗದೆ, ಪ್ರಜಾಪ್ರಭುತ್ವದಲ್ಲಿ ತಮ್ಮ ಸಮುದಾಯದ ರಾಜಕೀಯ ಪ್ರಾತಿನಿಧ್ಯ ಮತ್ತು ನ್ಯಾಯಯುತ ಹಕ್ಕುಗಳಿಗಾಗಿ ಸ್ವತಃ ಹೋರಾಡಬೇಕು ಎಂದು ಜನ ಸುರಾಜ್ ಪಕ್ಷದ ಸಂಸ್ಥಾಪಕ ಪ್ರಶಾಂತ್ ಕಿಶೋರ್ ಕರೆ ನೀಡಿದ್ದಾರೆ. ರಾಜಧಾನಿಯ ಸಬ್ಜಿಬಾಗ್‌ನಲ್ಲಿ ನಡೆದ ಅಲ್ಪಸಂಖ್ಯಾತರ ಸಮಾವೇಶವನ್ನು ಉದ್ದೇಶಿಸಿ ಮಾತನಾಡಿದ ಅವರು, ಯಾವುದೇ ಪಕ್ಷವನ್ನು ಕುರುಡಾಗಿ ಬೆಂಬಲಿಸುವ ಬದಲು ರಾಜಕೀಯದಲ್ಲಿ ತಮ್ಮ ಸರಿಯಾದ ಪಾಲು ಪಡೆದುಕೊಳ್ಳಲು ಅಲ್ಪಸಂಖ್ಯಾತರು ಮುಂಚೂಣಿಗೆ ಬರಬೇಕು ಎಂದರು. ತಮ್ಮನ್ನು ಬೆಂಬಲಿಸಿದ ಮುಸ್ಲಿಂ ಮತದಾರರಿಗೆ ಕೃತಜ್ಞತೆ ಸಲ್ಲಿಸಿದರು.

# ಬ್ರಿಕ್ಸ್ ಔತಣಕೂಟದ ಸಸ್ಯಾಹಾರಿ ಮೆನು ಕುರಿತು ರಾಜಕೀಯ ಗದ್ದಲ

ನವದೆಹಲಿ:ನವದೆಹಲಿಯ ಭಾರತ ಮಂಟಪದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಬ್ರಿಕ್ಸ್ ಶೃಂಗಸಭೆಯ ನಾಯಕರು ಹಾಗೂ ವಿದೇಶಿ ಪ್ರತಿನಿಧಿಗಳಿಗಾಗಿ ಆಯೋಜಿಸಿದ್ದ ಔತಣಕೂಟದಲ್ಲಿ ಬಡಿಸಲಾದ ಸಂಪೂರ್ಣ ಸಸ್ಯಾಹಾರಿ ಭೋಜನದ ಮೆನು ಇದೀಗ ತೀವ್ರ ರಾಜಕೀಯ ವಾಕ್ಸ



ಮರಕ್ಕೆ ಕಾರಣವಾಗಿದೆ. ಔತಣಕೂಟದಲ್ಲಿ ಸಂಪೂರ್ಣ ಸಸ್ಯಾಹಾರಿ ಆಹಾರ ನೀಡಿದ್ದಕ್ಕಾಗಿ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿ ಸರ್ಕಾರದ ವಿರುದ್ಧ ಪರೋಕ್ಷವಾಗಿ ವಾಗ್ದಾಳಿ ನಡೆಸಿದ್ದರೆ, ಕೇಂದ್ರ ಸಚಿವ ಕಿರಣ್‌ರಿಜಿಜು ತೀಕ್ಷ್ಣವಾಗಿ ತಿರುಗೇಟು ನೀಡಿದ್ದಾರೆ.

# ಪಾಕ್ ಸೇನಾ ಮುಖ್ಯಸ್ಥ ಮುನೀರ್ ವಿರುದ್ಧ ಕಿಡಿಕಾರಿದ ಇರಾನ್ ಪತ್ರಕರ್ತ

ನವದೆಹಲಿ:ನವದೆಹಲಿಯ ಬ್ರಿಕ್ಸ್ ಶೃಂಗ ಸಭೆಯ ವೇಳೆ ಸುದ್ದಿ ಸಂಸ್ಥೆ ANI ಜೊತೆ ಮಾತನಾಡಿದ ಇರಾನ್ ಪತ್ರಕರ್ತ ಬಾಸಿಮ್ ಲಾಲೆಹ್, ಪಾಕಿಸ್ತಾನಿ ಸೇನಾ ಮುಖ್ಯಸ್ಥ ಅಸೀಮ್ ಮುನೀರ್ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. "ಮಿಸ್ಟರ್ ಮುನೀರ್, ನೀವು ಯಾವುದಕ್ಕೂ ಲಾಯಕ್ಕಿಲ್ಲ, ನಿಮ್ಮನ್ನು ಕೆಲಸದಿಂದ ತೆಗೆದುಹಾಕಲಾಗಿದೆ" ಎಂದು ನೇರವಾಗಿ ವಾಗ್ದಾಳಿ ನಡೆಸಿದ ಅವರು, ಸ್ವಂತ ಆರ್ಥಿಕತೆಯನ್ನೇ ನಿಭಾಯಿಸಲಾಗದ ಪಾಕಿಸ್ತಾ ನದ ಮಿಲಿಟರಿ ಆಡಳಿತವೇ ಕೊಲ್ಲಿ ಪ್ರದೇಶದ ಅಸ್ಥಿರತೆಗೆ ಮೂಲ ಕಾರಣ ಎಂದು ದೂರಿ ದ್ದಾರೆ.ಭಾರತವು ಪ್ರಾದೇಶಿಕ ಭದ್ರತೆ ಮತ್ತು ಶಾಂತಿಯ ಮುಖ್ಯ ನಿಯಂತ್ರಕ ಶಕ್ತಿಯಾಗಿ ಹೊರಹೊಮ್ಮಿರುವುದನ್ನು ಎತ್ತಿಹಿಡಿದಿವೆ.



# 9/11 ದಾಳಿಗೂ ಮುನ್ನವೇ ಭಾರತದ ಮೇಲೂ ಕಣ್ಣಿಟ್ಟಿದ್ದ ಲಾಡೆನ್

ನವದೆಹಲಿ : ಅಮೆರಿಕದ ಬೇಗೂಢಚರ ಸಂಸ್ಥೆಯಾದ ಸೆಂಟ್ರಲ್ ಇಂಟೆಲಿಜೆನ್ಸ್ ಏಜೆನ್ಸಿ (CIA) ಬಿಲ್ ಕ್ಲಿಂಟನ್ ಹಾಗೂ ಜಾರ್ಜ್ ಡಬ್ಲ್ಯೂ ಬುಷ್ ಅಧ್ಯಕ್ಷತೆಯ ಅವಧಿಯ 70ಕ್ಕೂ ಹೆಚ್ಚು ಅತಿ ರಹಸ್ಯ ಇಂಟೆಲಿಜೆನ್ಸ್ ವರದಿಗಳನ್ನು ಸಾರ್ವಜನಿಕವಾಗಿ ಬಹಿರಂಗಗೊಳಿಸಿದೆ. 100ಕ್ಕೂ ಹೆಚ್ಚು



ಪುಟಗಳನ್ನು ಒಳಗೊಂಡಿರುವ ಈ ರಹಸ್ಯ ದಾಖ ಲೆಗಳು, 9/11 ದಾಳಿಗಿಂತಲೂ ಮುಂಚಿತವಾಗಿಯೇ ಅಲ್–ಖೈದಾ ಉಗ್ರ ಸಂಘಟನೆಯ ಮುಖ್ಯಸ್ಥ ಒಸಾಮಾ ಬಿನ್ ಲಾಡೆನ್ ದಾಳಿ ನಡೆಸಲು ಸಂಚು ರೂಪಿಸಿದ್ದ ದೇಶಗಳ ಪಟ್ಟಿಯಲ್ಲಿ ಭಾರತವೂ ಸೇರಿತ್ತು ಎಂಬ ಸತ್ಯವನ್ನು ಬಹಿರಂಗಪಡಿಸಿವೆ.



ಕರಾವಳಿ ತರಂಗಿಣಿ

# ಕಲಾ ತರಂಗಿಣಿ



## 'ಗಣಪತಿ ಬಪ್ಪ ಮೋರಿಯಾ' ಟೈಟಲ್, ಫಸ್ಟ್ ಲುಕ್ ಪೋಸ್ಟರ್ ಅನಾವರಣ

ಕನ್ನಡ ಚಿತ್ರರಂಗದಲ್ಲಿ ಹೊಸ ಬಗೆಯ ಕಥೆಗಳ ಅಲೆ ಜೋರಾಗಿದ್ದು, ಇದೀಗ ಮತ್ತೊಂದು ವಿಭಿನ್ನ ಹಾಗೂ ಭರವಸೆಯ ಹೊಸ ಚಿತ್ರ ಸೆಟ್ಟೇರಿದೆ. ಚಿತ್ರಕ್ಕೆ 'ಗಣಪತಿ ಬಪ್ಪ ಮೋರಿಯಾ' ಎಂದು ಶೀರ್ಷಿಕೆ ಇಡಲಾಗಿದ್ದು, ಚಿತ್ರತಂಡ ಅಧಿಕೃತವಾಗಿ ಟೈಟಲ್ ಜೊತೆಗೆ ಆಕರ್ಷಕ ಫಸ್ಟ್ ಲುಕ್ ಮೋಷನ್ ಪೋಸ್ಟರ್ ಅನ್ನು ಬಿಡುಗಡೆ ಮಾಡುವ ಮೂಲಕ ಅಧಿಕೃತ ಪ್ರಚಾರ ಕಾರ್ಯಕ್ಕೆ ಚಾಲನೆ ನೀಡಿದೆ. ಸಂಪೂರ್ಣ ಹೊಸತನದಿಂದ ಕೂಡಿರುವ ಪೋಸ್ಟರ್ ಸದ್ಯ ಸಿನಿಪ್ರಿಯರ ಗಮನ ಸೆಳೆಯುತ್ತಿದೆ. ಈ ಚಿತ್ರವು ಪೊಲಿಟಿಕಲ್ ಥ್ರಿಲ್ಲರ್ ಜಾನರ್‌ನಲ್ಲಿ ಮೂಡಿಬರಲಿದೆ. ಕಥೆಯ ಗಟ್ಟಿತನಕ್ಕಾಗಿ ಚಿತ್ರತಂಡ ಬರೋಬ್ಬರಿ ಒಂದೂವರೆಯಿಂದ ಎರಡು ವರ್ಷಗಳ ಕಾಲ ಪ್ರಿ-ಪ್ರೊಡಕ್ಷನ್ ನಡೆಸಿದೆ. ಈಗಾಗಲೇ ಚಿತ್ರದ ಮೊದಲ ಹಂತದ ಚಿತ್ರೀಕರಣ ಯಶಸ್ವಿಯಾಗಿ ಪೂರ್ಣಗೊಂಡಿದ್ದು, ಮುಂದಿನ ತಿಂಗಳಿಂದ ಎರಡನೇ ಹಂತದ ಶೂಟಿಂಗ್ ಭರದಿಂದ ಸಾಗಲಿದೆ. ಚಿತ್ರದಲ್ಲಿ ಭರವಸೆಯ ಯುವ ತಾರಾಗಣವಿದ್ದು, 'ಮನದ ಕಡಲು' ಸುಮುಖ, 'ಜಾಮ್ ಅಂಡ್ ಜೆರಿ' ಖ್ಯಾತಿಯ ನಿಶ್ಚಿತ್ ಕರೋಡಿ, 'ಬಿಂಗೋ' ಚಿತ್ರದ ಚಂದನ್ ಆರ್.ಕೆ ಹಾಗೂ 'ಕಾಮಿಡಿ ಕಿಲಾಡಿಗಳು' ಸೂರಜ್ ಮುಖ್ಯ ಪಾತ್ರಗಳಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ಇನ್ನು ಚಿತ್ರದ ನಾಯಕಿಯಾಗಿ ತೆಲುಗು ನಟಿ ಬಾಂಧವಿ ಶ್ರೀಧರ್ ಬಣ್ಣ ಹಚ್ಚಿದ್ದಾರೆ. ಇವರ ಜೊತೆಗೆ ಆಡಿಷನ್ ಮೂಲಕ ರಾಜ್ಯಾದ್ಯಂತ ಆಯ್ಕೆಯಾದ ಹಲವು ಹೊಸ ಪ್ರತಿಭೆಗಳಿಗೂ ಚಿತ್ರದಲ್ಲಿ ಅವಕಾಶ ನೀಡಲಾಗಿದೆ. ಚಿತ್ರಕ್ಕೆ ಬಲಿಷ್ಠ ತಾಂತ್ರಿಕ ತಂಡದ ಸಾಥ್ ಸಿಕ್ಕಿದ್ದು, ಹೊಸ ಪ್ರತಿಭೆ ಸಂಜಯ್ ಕೆ.ಕೆ.ಕಥೆ, ಚಿತ್ರಕಥೆ ಬರೆದು ಈ ಚಿತ್ರದ ಮೂಲಕ ಸ್ವತಂತ್ರ ನಿರ್ದೇಶಕರಾಗಿ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡುತ್ತಿದ್ದಾರೆ. ಶಿವಣ್ಣ ಅಭಿನಯದ 'ಘೋಸ್ಟ್' ಚಿತ್ರಕ್ಕೆ ಸಂಭಾಷಣೆ ಬರೆದು ಸೈ ಎನಿಸಿಕೊಂಡಿದ್ದ ಪ್ರಸನ್ನ ಈ ಚಿತ್ರಕ್ಕೂ ಸಂಭಾಷಣೆಯ ಜವಾಬ್ದಾರಿ ಹೊತ್ತಿದ್ದಾರೆ. ಹೆಸರಾಂತ ಸಂಗೀತ ನಿರ್ದೇಶಕ ಮಿಥುನ್ ಮುಕುಂದನ್ ಸಂಗೀತ ಸಂಯೋಜನೆ ಮಾಡುತ್ತಿದ್ದು, 'ಮಫ್ತಿ' ಖ್ಯಾತಿಯ ಆನಂದ್ ಮೀನಾಕ್ಷಿ ಛಾಯಾಗ್ರಹಣ ನಿರ್ವಹಿಸುತ್ತಿದ್ದಾರೆ. 'ಕಾಟೇರ' ಖ್ಯಾತಿಯ ಗುಣ ಪ್ರೊಡಕ್ಷನ್ ಡಿಸೈನರ್ ಆಗಿ ಕೆಲಸ ಮಾಡುತ್ತಿದ್ದರೆ, ಮಹೇಶ್ ತೊಗಟ ಚಿತ್ರದ ಸಂಕಲನದ ಜವಾಬ್ದಾರಿ ಹೊತ್ತಿದ್ದಾರೆ.



## ಶರಣ್ ಕಂಠಸಿರಿಯಲ್ಲಿ 'ನೀ ನಂಗೆ ಅಲ್ಲವಾ' 'ಜಗಿ ಜಿಕ್ಕ ಜಿಕ್ಕ' ಹಾಡು

ಸುರಾಗ್ ಮೂವೀಸ್ ಲಾಂಛನದಲ್ಲಿ ಜಯರಾಮ ದೇವಸಮುದ್ರ ನಿರ್ಮಿಸಿರುವ, ಮನೋಜ್ ಪಿ ನಡಲುಮನೆ ನಿರ್ದೇಶನದ ಹಾಗೂ ರಾಹುಲ್ ಅರ್ಕಾಟ್, ಕಾಶಿ ಮಾ ನಾಯಕ - ನಾಯಕಿಯಾಗಿ ನಟಿಸಿರುವ 'ನೀ ನಂಗೆ ಅಲ್ಲವಾ' ಚಿತ್ರದ ಮೊದಲ ಹಾಡು 'ನೋ ನೋ' ಜನಪ್ರಿಯವಾಗಿದೆ. ಇತ್ತೀಚೆಗಷ್ಟೇ ಚಿತ್ರದ ಎರಡನೇ ಹಾಡು 'ಜಗಿ ಜಿಕ್ಕ ಜಿಕ್ಕ' ಸರಿಗಮ ಯುಟ್ಯೂಬ್ ಚಾನಲ್‌ನಲ್ಲಿ ಬಿಡುಗಡೆಯಾಗಿದೆ. ನಿರ್ದೇಶಕ ಮನೋಜ್ ಪಿ ನಡಲುಮನೆ ಅವರು ಬರೆದಿರುವ ಈ ಹಾಡನ್ನು ಹೆಸರಾಂತ ನಟ ಶರಣ್ ಹಾಡಿದ್ದಾರೆ. ಸೂರಜ್ ಜೋಯಿಸ್ ಸಂಗೀತ ಸಂಯೋಜಿಸಿದ್ದಾರೆ. ರಾಮ್ ಕಿರಣ್ ಮಾಸ್ಟರ್ ನೃತ್ಯ ಸಂಯೋಜಿಸಿರುವ ಈ ಹಾಡಿಗೆ ನಾಯಕ ರಾಹುಲ್ ಅರ್ಕಾಟ್, ನಟಿ ಐಶ್ವರ್ಯ ಸಿಂಧೋಗಿ ಹಾಗೂ ನಟ ಗಿರಿ ಶಿವಣ್ಣ ಹೆಜ್ಜೆ ಹಾಕಿದ್ದಾರೆ. ನಟರಾದ ನವೀನ್ ಶಂಕರ್, ವಿಕಾಶ್ ಉತ್ತಯ್ಯ ಹಾಗೂ ಸಿದ್ದು ಮೂಲಿಮನಿ ಈ ಹಾಡನ್ನು ಅನಾವರಣ ಮಾಡಿದರು. ಹಾಡು ಚೆನ್ನಾಗಿದೆ. ಚಿತ್ರ ಕೂಡ ಚೆನ್ನಾಗಿರುವ ಭರವಸೆ ಇದೆ. "ನೀ ನಂಗೆ ಅಲ್ಲವಾ" ಚಿತ್ರ ಎಲ್ಲರ ಮನ ಗೆಲ್ಲಲ್ಲಿ ಎಂದು ಮೂರು ಜನ ನಟರು ಹಾರೈಸಿದರು. ಹಾಡು ಬಿಡುಗಡೆಯ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. 'ನೀ ನಂಗೆ ಅಲ್ಲವಾ' ಚಿತ್ರದ ಮೊದಲ ಹಾಡಿಗೆ ಸಿಗುತ್ತಿರುವ ಜನಪ್ರಿಯತೆಗೆ ಮನ ತುಂಬಿ ಬಂದಿದೆ. ಈಗ ಚಿತ್ರದ ಎರಡನೇ ಹಾಡು ಬಿಡುಗಡೆಯಾಗಿದೆ. 'ಜಗಿ ಜಿಕ್ಕ ಜಿಕ್ಕ' ಎಂಬ ಹಾಡು ಬಿಡುಗಡೆಯಾಗಿದೆ. ಈ ಹಾಡನ್ನು ನಾನೇ ಬರೆದಿದ್ದೇನೆ. ಶರಣ್ ಸೊಗಸಾಗಿ ಹಾಡಿದ್ದಾರೆ. ಸೂರಜ್ ಜೋಯಿಸ್ ಸಂಗೀತ ನಿರ್ದೇಶನ, ರಾಮ್ ಕಿರಣ್ ನೃತ್ಯ ನಿರ್ದೇಶನ, ಉದಯ್ ಲೀಲಾ ಛಾಯಾಗ್ರಹಣ ಹಾಗೂ ರಾಹುಲ್ ಅರ್ಕಾಟ್, ಐಶ್ವರ್ಯ ಸಿಂಧೋಗಿ , ಗಿರಿ ಶಿವಣ್ಣ ಅಭಿನಯ ಈ ಹಾಡಿನ ಹೈಲೆಟ್ ಎಂದರು ನಿರ್ದೇಶಕ ಮನೋಜ್ ಪಿ ನಡಲುಮನೆ. ನನಗೆ ಒಳ್ಳೆಯ ತಂಡ ಸಿಕ್ಕಿದೆ. ಈ ತಂಡದ ಜೊತೆಗೆ ಕೆಲಸ ಮಾಡುತ್ತಿರುವುದು ಖುಷಿಯಾಗಿದೆ. ಚಿತ್ರದಲ್ಲಿ ಒಟ್ಟು ಐದು ಹಾಡುಗಳಿದ್ದು, ಎರಡು ಹಾಡುಗಳನ್ನು ಈಗ ಬಿಡುಗಡೆಯಾಗಿ ಎಲ್ಲರ ಮನ ಗೆದ್ದಿದೆ. ತಂತ್ರಜ್ಞರು ಹಾಗೂ ಕಲಾವಿದರ ಸಹಕಾರದಿಂದ ಹಾಡು ಅದ್ದೂರಿಯಾಗಿ ಮೂಡಿಬಂದಿದೆ.



## ಯುವ ರಾಜಕುಮಾರ್ ಈಗ 'ಪವರ್ ಮ್ಯಾನ್'

ತರುಣ್ ಸುಧೀರ್ ಹಾಗೂ ಜಗದೀಶ್ ಗೌಡ ಅವರ ನಿರ್ಮಾಣದಲ್ಲಿ, ಜಡೇಶ್ ಕೆ ಹಂಪಿ ನಿರ್ದೇಶನದಲ್ಲಿ ಮೂಡಿ ಬರುತ್ತಿರುವ ನೂತನ ಚಿತ್ರದಲ್ಲಿ ಯುವ ರಾಜಕುಮಾರ್ ಅವರು ನಾಯಕರಾಗಿ ನಟಿಸುತ್ತಿರುವ ವಿಷಯ ಇತ್ತೀಚೆಗೆ ತಿಳಿದು ಬಂದಿತ್ತು. ಈ ಚಿತ್ರದ ಶೀರ್ಷಿಕೆ ಏನಿರಬಹುದು? ಎಂಬ ಕುತೂಹಲ ಎಲ್ಲರಲ್ಲೂ ಮನೆ ಮಾಡಿತ್ತು. ಆ ಕುತೂಹಲಕ್ಕೆ ಈಗ ತೆರೆ ಬಿದ್ದಿದೆ. ಗಣೇಶ ಚತುರ್ಥಿಯ ಶುಭದಿನದಂದು ಈ ಚಿತ್ರದ ಶೀರ್ಷಿಕೆ ಅನಾವರಣವಾಗಿದೆ. ಸದಾಶಿವನಗರದ ಡಾ||ರಾಜಕುಮಾರ್ ಅವರು ವಾಸವಿದ್ದ ಜಾಗದಲ್ಲೇ ಈ ಚಿತ್ರದ ಶೀರ್ಷಿಕೆ ಅನಾವರಣವಾಗಿರುವುದು ವಿಶೇಷ. ರಾಘವೇಂದ್ರ ರಾಜಕುಮಾರ್ ಅವರು ಈ ಚಿತ್ರದ ಶೀರ್ಷಿಕೆ ಅನಾವರಣ ಮಾಡಿ, ಚಿತ್ರ ಯಶಸ್ವಿಯಾಗಲೆಂದು ಹಾರೈಸಿದರು. ಮಂಗಳ ರಾಘವೇಂದ್ರ ರಾಜಕುಮಾರ್, ಅಶ್ವಿನಿ ಪುನೀತ್ ರಾಜಕುಮಾರ್ ಮುಂತಾದವರು ಶೀರ್ಷಿಕೆ ಅನಾವರಣ ಸಮಾರಂಭದಲ್ಲಿ ಉಪಸ್ಥಿತರಿದ್ದರು. ಆರಂಭದಿಂದಲೇ ಸಾಕಷ್ಟು ಸದ್ದು ಮಾಡುತ್ತಿರುವ ಈ ಚಿತ್ರಕ್ಕೆ 'ಪವರ್ ಮ್ಯಾನ್' ಎಂದು ಹೆಸರಿಡಲಾಗಿದೆ. 'ದಿ ಗ್ರೇಟೆಸ್ಟ್ ಪವರ್ ಇನ್ ಎ ಗುಡ್ ಹಾರ್ಟ್' ಎಂಬ ಅಡಿಬರಹ ಈ ಚಿತ್ರಕ್ಕಿದೆ. ನಿನ್ನೆ ತನಕ ನಾವು ಈ ಚಿತ್ರದ ಶೀರ್ಷಿಕೆಯನ್ನು ಡಿಜಿಟಲ್ ಅನಾವರಣ ಮಾಡೋಣ ಅಂದುಕೊಂಡಿದ್ದೆವು. ಆದರೆ, ದೇವರ ದಯೆಯಿಂದ ಅನಿರೀಕ್ಷಿತವಾಗಿ, ಅದರಲ್ಲೂ ಡಾ|| ರಾಜಕುಮಾರ್, ಪವರ್ ಸ್ಟಾರ್ ಪುನೀತ್ ರಾಜಕುಮಾರ್ ಅವರು ವಾಸವಿದ್ದ ಸ್ಥಳದಲ್ಲಿ ನಮ್ಮ 'ಪವರ್ ಮ್ಯಾನ್' ಚಿತ್ರದ ಶೀರ್ಷಿಕೆ ರಾಘವೇಂದ್ರ ರಾಜಕುಮಾರ್ ಅವರಿಂದ ಅನಾವರಣವಾಗಿದ್ದು ಬಹಳ ಖುಷಿಯಾಗಿದೆ ಎಂದರು.



## 'ಬೇಲ್' ಚಿತ್ರದ 'ಕುಮಾರಿ' ಸ್ಪೆಷಲ್ ಸಾಂಗ್ ಔಟ್

ಸ್ಯಾಂಡಲ್‌ವುಡ್‌ನಲ್ಲಿ ಭಾರಿ ಕುತೂಹಲ ಮೂಡಿಸಿರುವ, ಬಹುತಾರಾಗಣದ ಬಹುನಿರೀಕ್ಷಿತ ಚಿತ್ರ 'ಬೇಲ್' ಸಿನಿಮಾದಿಂದ ಬಹುನಿರೀಕ್ಷಿತ ಹಾಡು 'ಕುಮಾರಿ' ಬಿಡುಗಡೆಯಾಗಿದ್ದು, ಸೋಷಿಯಲ್ ಮೀಡಿಯಾದಲ್ಲಿ ಧೂಳೆಬ್ಬಿಸುತ್ತಿದೆ. ಈ ಸಾಂಗ್‌ನಲ್ಲಿ ಸೋಷಿಯಲ್ ಮೀಡಿಯಾ ಸೆನ್ಸೇಷನ್ ಹಾಗೂ ನಟಿ ನಿವೇದಿತಾ ಗೌಡ ತಮ್ಮ ಮೋಹಕ ಮೈಮಾಟ ಮತ್ತು ಸಖತ್ ಸ್ಟೆಪ್ಸ್‌ಗಳ ಮೂಲಕ ಪಡ್ಡೆಹೈಕ್ಳ ದಿಲ್ ಗೆದ್ದಿದ್ದಾರೆ. ಸದ್ಯ ಯೂಟ್ಯೂಬ್‌ನಲ್ಲಿ ಧೂಳೆಬ್ಬಿಸುತ್ತಿರುವ ಈ ಹಾಡು ಬಿಡುಗಡೆಯಾದ ಕೆಲವೇ ಕ್ಷಣಗಳಲ್ಲಿ ಎಲ್ಲರ ಬಾಯಲ್ಲೂ 'ಕುಮಾರಿ ಕುಮಾರಿ' ಎಂದು ಗುನುಗುವಂತೆ ಮಾಡಿ ಭರ್ಜರಿ ಕ್ರೇಜ್ ಸೃಷ್ಟಿಸಿದೆ. ಸಿನಿಮಾದ ಕಥಾಹಂದರದಲ್ಲಿ ಸಿನಿಮಾ ಶೂಟಿಂಗ್ ಹಿನ್ನೆಲೆಯಲ್ಲಿ ಬರುವಂತಹ ಕಲರ್‌ಫುಲ್ ಡ್ಯಾನ್ಸ್ ನಂಬರ್‌ನಲ್ಲಿ ನಿವೇದಿತಾ ಗೌಡ ಅವರೊಂದಿಗೆ ಸ್ಯಾಂಡಲ್‌ವುಡ್‌ನ ಪ್ರತಿಭಾವಂತ ನಟ 'ಲೂಸ್ ಮಾದ' ಯೋಗಿ ಕೂಡ ಸಖತ್ ಎನರ್ಜಿಟಿಕ್ ಆಗಿ ಹೆಜ್ಜೆ ಹಾಕಿದ್ದಾರೆ. ಯೋಗಿ ಮತ್ತು ನಿವೇದಿತಾ ಅವರ ಡ್ಯಾನ್ಸ್ ಕೆಮಿಸ್ಟ್ರಿ ಹಾಗೂ ಆಕರ್ಷಕ ಮೂವ್ಸ್‌ಗಳಿಗೆ ಅಭಿಮಾನಿಗಳು ಫಿದಾ ಆಗಿದ್ದಾರೆ. ಖ್ಯಾತ ಸಂಗೀತ ನಿರ್ದೇಶಕ ಬಿ. ಅಜನೀಶ್ ಲೋಕನಾಥ್ ಅವರ ಟ್ರೆಂಡಿ ಬೀಟ್ಸ್‌ಗೆ ನಿರ್ದೇಶಕ ಪವನ್ ಒಡೆಯರ್ ಕ್ಯಾಚಿ ಸಾಹಿತ್ಯ ಬರೆದಿದ್ದು, ಪ್ರಸಿದ್ಧ ಗಾಯಕರಾದ ನಕಾಶ್ ಅಜೀಜ್ ಹಾಗೂ ಮಂಗ್ಲಿ ಜಂಟಿಯಾಗಿ ತಮ್ಮ ಕಂಠದ ಮೂಲಕ ಹುರುಪು ತುಂಬಿದ್ದಾರೆ. ಪ್ರತಿಷ್ಠಿತ 'ಕೆವಿಎನ್ ಪ್ರೊಡಕ್ಷನ್ಸ್' ಬ್ಯಾನರ್‌ನಡಿ ಖ್ಯಾತ ನಿರ್ಮಾಪಕ ವೆಂಕಟ್ ಕೆ. ನಾರಾಯಣ ಅದ್ಧೂರಿ ಬಜೆಟ್‌ನಲ್ಲಿ ಈ ಚಿತ್ರವನ್ನು ನಿರ್ಮಿಸಿದ್ದಾರೆ.




## 'ಬಿಂಗೊ' ಸೆಪ್ಟೆಂಬರ್ 25 ರಂದು ತೆರೆಗೆ

ಈ ಹಿಂದೆ 'ಶಂಭೋ ಶಿವ ಶಂಕರ' ಚಿತ್ರ ನಿರ್ದೇಶಿಸಿದ್ದ ಶಂಕರ್ ಕೋನಮಾನಹಳ್ಳಿ ನಿರ್ದೇಶನದ, ಆರ್ ಕೆ ಚಂದನ್ ಹಾಗೂ ರಾಗಿಣಿ ದ್ವಿವೇದಿ ಪ್ರಮುಖಪಾತ್ರದಲ್ಲಿ ನಟಿಸಿರುವ ಹಾಗೂ ಆರ್.ಕೆ ಸ್ಟುಡಿಯೋಸ್ ಮತ್ತು ಮುತರಾ ವೆಂಚರ್ಸ್ ಲಾಂಛನದಲ್ಲಿ ಲಲಿತಾ ಸ್ವಾಮಿ ಮತ್ತು ಆರ್ ಪರಾಂಕುಶ 'ಬಿಂಗೊ' ಚಿತ್ರದ ಟ್ರೇಲರ್ ಇತ್ತೀಚೆಗೆ ಬಿಡುಗಡೆಯಾಗಿದೆ. ಪುಟ್ಟೇಗೌಡ ಅವರು ಈ ಚಿತ್ರದ ಟ್ರೇಲರ್ ಅನಾವರಣ ಮಾಡಿ, ಚಿತ್ರ ಯಶಸ್ವಿಯಾಗಲೆಂದು ಶುಭ ಕೋರಿದರು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. ನಿರ್ದೇಶಕ ಶಂಕರ್ ಅವರು ನನಗೆ 'ಬಿಂಗೊ' ಚಿತ್ರದ ಕಥೆ ಹೇಳಿದಾಗ ಬಹಳ ಇಷ್ಟವಾಯಿತು. ಎರಡು ಶೇಡ್‌ಗಳಲ್ಲಿ ನನ್ನ ಪಾತ್ರವಿರುತ್ತದೆ. ಈವರೆಗೂ ಮಾಡಿರದ ಪಾತ್ರದಲ್ಲಿ ಅಭಿನಯಿಸಿದ್ದೇನೆ. ಈ ಚಿತ್ರದ ಮೂಲಕ ಆರ್.ಕೆ.ಚಂದನ್ ಎಂಬ ಪ್ರತಿಭಾವಂತ ಯುವಕ ನಾಯಕನಾಗಿ ಚಿತ್ರರಂಗಕ್ಕೆ ಅಡಿಯಿಡುತ್ತಿದ್ದಾರೆ. ರಕ್ಷಾ ನಿಂಬರ್ಗಿ ನಾಯಕಿಯಾಗಿ ಅಭಿನಯಿಸಿದ್ದಾರೆ.



## ದೇವರಕೊಂಡ-ಮಂದಣ್ಣ ಕಾಂಬಿನೇಷನ್‌ನ 'ರಣಬಾಲಿ' ಟೀಸರ್ ರಿಲೀಸ್

ತೆಲುಗು ಚಿತ್ರರಂಗದ ಸ್ಟಾರ್ ನಟ ವಿಜಯ್ ದೇವರಕೊಂಡ ಹಾಗೂ ನಿರ್ದೇಶಕ ರಾಹುಲ್ ಸಂಕೃತ್ಯನ್ ಕಾಂಬಿನೇಷನ್‌ನಲ್ಲಿ ಅತ್ಯಂತ ಅದ್ಧೂರಿಯಾಗಿ ಮೂಡಿಬರುತ್ತಿರುವ ಪ್ಯಾನ್-ಇಂಡಿಯಾ ಆಕ್ಷನ್ ಎಪಿಕ್ 'ರಣಬಾಲಿ' ಚಿತ್ರದ ಬಹುನಿರೀಕ್ಷಿತ ಟೀಸರ್ ಬಿಡುಗಡೆಯಾಗಿದೆ. 1854ರಿಂದ 1878ರ ನಡುವಿನ ಬ್ರಿಟಿಷ್ ಆಳ್ವಿಕೆಯ ಕಾಲಘಟ್ಟದಲ್ಲಿ ರಾಯಲಸೀಮೆ ಪ್ರಾಂತ್ಯದಲ್ಲಿ ನಡೆದ ರೋಚಕ ನೈಜ ಘಟನೆಗಳನ್ನು ಆಧರಿಸಿ ಈ ಪಿರಿಯಾಡಿಕ್ ಡ್ರಾಮಾವನ್ನು ತೆರೆಗೆ ತರಲಾಗುತ್ತಿದ್ದು, ಚಿತ್ರದಲ್ಲಿ ವಿಜಯ್ ದೇವರಕೊಂಡ ಶಕ್ತಿಶಾಲಿ ಯೋಧನಾಗಿ ಅಬ್ಬರಿಸಿದ್ದಾರೆ. ಟಾಲಿವುಡ್‌ನ ಪ್ರತಿಷ್ಠಿತ ನಿರ್ಮಾಣ ಸಂಸ್ಥೆ ಮೈತ್ರಿ ಮೂವಿ ಮೇಕರ್ಸ್ ಬಂಡವಾಳ ಹೂಡಿರುವ ಈ ಬೃಹತ್ ಕ್ಯಾನ್ವಾಸ್‌ನ ಸಿನಿಮಾ, ದಸರಾ ಹಬ್ಬದ ವಿಶೇಷ ಕೊಡುಗೆಯಾಗಿ ಅಕ್ಟೋಬರ್ 16ರಂದು ವಿಶ್ವಾದ್ಯಂತ ಚಿತ್ರಮಂದಿರಗಳಲ್ಲಿ ತೆರೆಕಾಣಲು ಸಜ್ಜಾಗಿದೆ. ಚಿತ್ರದಲ್ಲಿ ವಿಜಯ್ ದೇವರಕೊಂಡ 'ರಣಬಾಲಿ' ಎಂಬ ಪರಾಕ್ರಮಿ ಯೋಧನ ಪಾತ್ರದಲ್ಲಿ ಕಾಣಿಸಿಕೊಂಡಿದ್ದರೆ ನ್ಯಾಷನಲ್ ಕ್ರಶ್ ರಶ್ಮಿಕಾ ಮಂದಣ್ಣ ಅವರ ಪತ್ನಿ 'ಜಯಮ್ಮ'ನ ಪಾತ್ರದಲ್ಲಿ ಬಣ್ಣಹಚ್ಚಿದ್ದಾರೆ.



## ಮಾದೇಶ್ ಆರಾಧ್ಯ ನಿರ್ದೇಶನದ 'RPF'

ಈಗ AI ಜಗತ್ತು. ಈ ತಂತ್ರಜ್ಞಾನದಿಂದ ಸಾಧ್ಯವಾಗದ್ದು ಯಾವುದು ಇಲ್ಲ. ಈಗ ಇದೇ ತಂತ್ರಜ್ಞಾನ ಬಳಸಿಕೊಂಡು 'RPF' ವೆಬ್ ಸಿರೀಸ್ ನಿರ್ಮಾಣವಾಗುತ್ತಿದೆ. ರಾಯರ ಕೃಪೆಯಿಂದ ತಶ್ವಿಶೈವಿ ಪ್ರೊಡಕ್ಷನ್ ಲಾಂಛನದಲ್ಲಿ ಮಧು ಮಂದಗೆರೆ ನಿರ್ಮಿಸುತ್ತಿರುವ ಈ ವೆಬ್ ಸರಣಿಯನ್ನು ಮಾದೇಶ್ ಆರಾಧ್ಯ ನಿರ್ದೇಶಿಸುತ್ತಿದ್ದು, ಮಧು ಮಂದಗೆರೆ ನಾಯಕನಾಗಿ ನಟಿಸುತ್ತಿದ್ದಾರೆ. ಇತ್ತೀಚೆಗೆ ಈ ವೆಬ್ ಸರಣಿಯ ಟೀಸರ್ ಬಿಡುಗಡೆ ಹಾಗೂ ಪತ್ರಿಕಾಗೋಷ್ಠಿ ನಡೆಯಿತು. ಇದು ಮಧು ಮಂದಗೆರೆಯ ಜೀವನದಲ್ಲಿ ನಡೆದಂತ ನೈಜ ಘಟನೆಯೊಂದನ್ನು ಆಧಾರವಾಗಿಟ್ಟುಕೊಂಡು ಮಾಡುತ್ತಿರುವ WEB SERIES ಆಗಿರುತ್ತದೆ. ಇದರ ವಿಶೇಷತೆ ಏನೆಂದರೆ ಈ ವೆಬ್ ಸಿರೀಸ್ ಅನ್ನು AI ತಂತ್ರಜ್ಞಾನವನ್ನು ಬಳಸಿಕೊಂಡು ಮಾಡುತ್ತಿದ್ದೇವೆ. ಕಲಾವಿದರ ಅಭಿನಯ ಮಾತ್ರ ನೈಜವಾಗಿರುತ್ತದೆ. ಉಳಿದಿದ್ದು AI ತಂತ್ರಜ್ಞಾನದೆ ಆಗಿರುತ್ತದೆ. ಇದನ್ನು ಕೆಲವು ವರ್ಷಗಳ ಹಿಂದ ಸಿನಿಮಾ ಮಾಡೋಣ ಅಂದು ಕೊಂಡೆವು ಆಗಲಿಲ್ಲ. ಈಗ ವೆಬ್‌ಸಿರೀಸ್ ಮಾಡುತ್ತಿದ್ದೇವೆ. ಟೀಸರ್ ಬಿಡುಗಡೆ ಮಾಡಿದ್ದೇವೆ. ಐದಾರು ಕಂತುಗಳು ಸಿದ್ದವಾಗಿದೆ. ಯಾವಾಗ ಹಾಗೂ ಯಾವುದರಲ್ಲಿ ಬಿಡುಗಡೆ ಮಾಡುತ್ತೇವೆ ಎಂದು ಸದ್ಯದಲ್ಲೇ ತಿಳಿಸುತ್ತೇವೆ ಎಂದರು.



## 'MR ಜಾಕ್' ಚಿತ್ರದ ಮೊದಲ ಹಾಡು ಬಿಡುಗಡೆ



'ಫಸ್ಟ್ rank ರಾಜು' ಚಿತ್ರದ ಮೂಲಕ ಅಭಿಮಾನಿಗಳ ಮನ ಗೆದ್ದಿರುವ ಗುರುನಂದನ್ ನಾಯಕರಾಗಿ ನಟಿಸಿರುವ, ಸುಮಂತ್ ಗೌಡ ನಿರ್ದೇಶನದ ಹಾಗೂ ಮಂಡಿಮನೆ ಟಾಕೀಸ್ ಲಾಂಛನದಲ್ಲಿ ಗುರುನಂದನ್ ಅವರು ತಮ್ಮ ಸ್ನೇಹಿತರೊಡಗೂಡಿ ನಿರ್ಮಾಣ ಮಾಡಿರುವ 'MR ಜಾಕ್' ಚಿತ್ರದ ಮೊದಲ ಹಾಡು ಆನಂದ್ ಆಡಿಯೋ ಯೂಟ್ಯೂಬ್ ಚಾನಲ್‌ನಲ್ಲಿ ಅನಾವರಣವಾಗಿದೆ. ನಿರ್ದೇಶಕ ಸುಮಂತ್ ಗೌಡ ಅವರೆ ಬರೆದಿರುವ ಈ ಹಾಡನ್ನು ಹೆಸರಾಂತ ಗಾಯಕ ಎಂ.ಸಿ.ಬಿಜ್ಜು ಹಾಡಿದ್ದಾರೆ. ಕಿರಣ್ ರವೀಂದ್ರನಾಥ್ ಸಂಗೀತ ಸಂಯೋಜಿಸಿದ್ದಾರೆ. ಇದು ಚಿತ್ರದ ಮೊದಲ ಹಾಗೂ ನಾಯಕನ ಪರಿಚಯದ ಗೀತೆಯಾಗಿದೆ. ಹಾಡು ಬಿಡುಗಡೆಯಾದ ಕ್ಷಣದಿಂದಲೇ ಅಪಾರ ಮೆಚ್ಚುಗೆ ವ್ಯಕ್ತವಾಗಿದ್ದು, ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗುತ್ತಿದೆ. 'MR ಜಾಕ್' ಚಿತ್ರದಲ್ಲಿ ಹಾಸ್ಯವೇ ಪ್ರಧಾನ. ಎಮೋಷನ್ ಸಹ ಇದೆ. ಅಷ್ಟೇ ಅಲ್ಲ. ಈಗಿನ ಜನರು ಬಯಸುವ ಎಲ್ಲಾ ಅಂಶಗಳು ಈ ಚಿತ್ರದಲ್ಲಿದೆ.

## ತಂದೆ ಹಾಗೂ ಸಹೋದರನ ಕನಸಿನ ಕೂಸಿಗೆ ಆಸರೆಯಾದ ಶ್ವೇತ ಬಾಲರಾಜ್

ಕನ್ನಡದ ಸುರದ್ರೂಪಿ ಹಾಗೂ ಪ್ರತಿಭಾವಂತ ನಟ ಸಂತೋಷ್ ಬಾಲರಾಜ್ ಅನಿರೀಕ್ಷಿತ ಸಾವು ಎಲ್ಲರಿಗೂ ತುಂಬಾ ನೋವು ತಂದ ವಿಷಯ. ಸಂತೋಷ್ ಬಾಲರಾಜ್ ಅವರು ನಿಧನರಾಗುವುದಕ್ಕೂ ಮೊದಲು 'ಬೆಂಟ್ಲಿ' ಎಂಬ ಚಿತ್ರದಲ್ಲಿ ನಟಿಸಿದ್ದರು ಹಾಗೂ ನಿರ್ದೇಶನವನ್ನು ಮಾಡಿದ್ದರು. ಸಂತೋಷ್ ಬಾಲರಾಜ್ ಅವರ ತಂದೆ ಆನೇಕಲ್ ಬಾಲರಾಜ್ ಅವರು ಈ ಚಿತ್ರವನ್ನು ನಿರ್ಮಾಣ ಮಾಡುತ್ತಿದ್ದರು. ವಿಪರ್ಯಾಸವೆಂದರೆ ಆನೇಕಲ್ ಬಾಲರಾಜ್ ಹಾಗೂ ಸಂತೋಷ್ ಬಾಲರಾಜ್ ಇಬ್ಬರು ಈಗ ನಿಧನರಾಗಿದ್ದಾರೆ. ಸಹೋದರ ಸಂತೋಷ್ ಬಾಲರಾಜ್ ಹಾಗೂ ತಂದೆ ಆನೇಕಲ್ ಬಾಲರಾಜ್ ಅವರ ಕನಸಿನ ಕೂಸಾಗಿದ್ದ ಈ ಚಿತ್ರವನ್ನು ಸಂತೋಷ್ ಬಾಲರಾಜ್ ಅವರ ಸಹೋದರಿ ಹಾಗೂ ಆನೇಕಲ್ ಬಾಲರಾಜ್ ಅವರ ಪುತ್ರಿ ಶ್ವೇತ ಬಾಲರಾಜ್ ಪೂರ್ಣಗೊಳಿಸಿ ತೆರೆಗೆ ತರಲು ಸಿದ್ದತೆ ಮಾಡಿಕೊಂಡಿದ್ದಾರೆ. ಸೆಪ್ಟೆಂಬರ್ 18ರಂದು ಬಿಡುಗಡೆಯಾಗಲಿದೆ.



## 1980ರ ಕಾಲಘಟ್ಟದ ಕಥೆಯಲ್ಲಿ ಶರಣ್, ದಿಗಂತ್ ಹಾಗೂ ನಿಶ್ವಿಕಾ ನಾಯ್ಡು

ಈಗ ಎಲ್ಲಾ ಕಡೆ 1980ರದೆ ಹವಾ. ಅದೇ ಕಾಲಘಟ್ಟದಲ್ಲಿ ನಡೆಯುವ ಸಿನಿಮಾ 'ಬೊಮ್ ಭಾಯ್'. ಈ ಚಿತ್ರದ ಮುಹೂರ್ತ ಸಮಾರಂಭ ಗಣಪತಿ ಹಬ್ಬದ ಶುಭದಿನದಂದು ನಡೆದಿದೆ. ಶರಣ್, ದಿಗಂತ್ ಹಾಗೂ ನಿಶ್ವಿಕಾ ನಾಯ್ಡು ಈ ಚಿತ್ರದ ಪ್ರಮುಖ ಪಾತ್ರದಲ್ಲಿ ಅಭಿನಯಿಸುತ್ತಿದ್ದಾರೆ. ವಿಂಧ್ಯಾ ಬಾಲಾಜಿ ಪ್ರೋತರಾಜ್ ಹಾಗೂ ಕಾಂತರಾಜ್ ನಿರ್ಮಿಸುತ್ತಿರುವ ಈ ಚಿತ್ರವನ್ನು ಶಶಿಧರ್ ನಿರ್ದೇಶಿಸುತ್ತಿದ್ದಾರೆ. ಗಣೇಶನ ಹಬ್ಬದ ಶುಭದಿನದಂದು ಈ ಚಿತ್ರ ಆರಂಭವಾಗಿದೆ. 'ಬೊಮ್ ಭಾಯ್' ಚಿತ್ರದ ಪೋಸ್ಟರ್ ತುಂಬಾ ಚೆನ್ನಾಗಿದೆ. ನನ್ನ ಹಿಂದಿನ ಯಾವ ಚಿತ್ರಗಳಲ್ಲಿ ಅಭಿನಯಿಸಿರದ ಪಾತ್ರ ಇದಾಗಿದೆ. ಶಶಿಧರ್ ಅವರ ಜೊತೆಗೆ ಬಹಳ ದಿನಗಳಿಂದ ಚರ್ಚಿಸುತ್ತಿದ್ದೆ. ಶಶಿಧರ್ ಒಂದೊಳ್ಳೆ ಕಥೆ ಮಾಡಿದ್ದಾರೆ. ಈ ಚಿತ್ರದಲ್ಲಿ ನಗುವೇ ಪ್ರಧಾನ. ಈಗ 1980 ಟ್ರೆಂಡ್ ಜೋರಾಗಿದೆ. ಆದರೆ, ಈ ಟ್ರೆಂಡ್ ಶುರುವಾಗುವುದಕ್ಕೂ ಮುನ್ನ ಈ ಚಿತ್ರದ ಕಥೆ ಸಿದ್ದಾವಾಗಿದೆ. ನಿರ್ಮಾಪಕರಿಗೆ ಇದು ಮೊದಲ ಚಿತ್ರ.






ಕರಾವಳಿ ತರಂಗಿಣಿ

# ಸಿನಿ ತರಂಗಿಣಿ

## ಅನಂತ್ ನಾಗ್ ಅವರಿಗೆ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ



ಕನ್ನಡ ಚಿತ್ರರಂಗದ ಹಿರಿಯ ನಟ ಹಾಗೂ ಭಾರತೀಯ ಸಿನಿಮಾ ರಂಗದ ಪ್ರಮುಖರಲ್ಲಿ ಒಬ್ಬರಾದ ಅಭಿನಯ ಚತುರ ಅನಂತ್ ನಾಗ್ ಅವರಿಗೆ ಚಿತ್ರರಂಗದ ಅತ್ಯುನ್ನತ ಗೌರವವಾದ ದಾದಾ ಸಾಹೇಬ್ ಫಾಲ್ಕೆ ಪ್ರಶಸ್ತಿ ಲಭಿಸಿರುವುದು ಪ್ರತಿಯೊಬ್ಬ ಕನ್ನಡಿಗನಿಗೂ ಹೆಮ್ಮೆಯ ವಿಷಯ. ಅನಂತ್ ನಾಗ್ ಅವರ ಐದು ದಶಕಗಳ ಸುದೀರ್ಘ ಸಿನಿಪಯಣ ಅತ್ಯಂತ ಅಪರೂಪದ್ದು. ಸಮಾಜಮುಖಿ ಸಿನಿಮಾಗಳಿಂದ ಹಿಡಿದು 'ಬೆಟ್ಟದ ಹೂವು', 'ಬಯಲು ದಾರಿ', 'ಚಂದನದ ಗೊಂಬೆ'ಯಂತಹ ಕೌಟುಂಬಿಕ ಚಿತ್ರಗಳು ಹಾಗೂ 'ಗಣೇಶನ ಮದುವೆ', 'ಗೌರಿ ಗಣೇಶ' ನಂತಹ ಅದ್ಭುತ ಹಾಸ್ಯಮಯ ಸಿನಿಮಾಗಳವರೆಗೆ ಅವರು ಜೀವಿಸಿದ ಪಾತ್ರಗಳು ಕೋಟ್ಯಂತರ ಪ್ರೇಕ್ಷಕರ ಮನಸ್ಸಿನಲ್ಲಿ ಶಾಶ್ವತವಾಗಿ ಉಳಿದಿವೆ. ಅವರ ಸ್ಪಷ್ಟ ಉಚ್ಚಾರಣೆ, ಸಹಜ ನಟನೆ ಹಾಗೂ ಪಾತ್ರಕ್ಕೆ ತಕ್ಕಂತೆ ತಮ್ಮನ್ನು ಬದಲಾಯಿಸಿಕೊಳ್ಳುವ ಅದ್ಭುತ ಕಲೆ ಭಾರತೀಯ ಚಿತ್ರರಂಗಕ್ಕೇ ಮಾದರಿ. ಹಿಂದಿ, ಮರಾಠಿ ಹಾಗೂ ಮಲಯಾಳಂ ಭಾಷೆಗಳಲ್ಲೂ ತಮ್ಮ ನಟನೆಯ ಛಾಪು ಮೂಡಿಸಿರುವ ಅವರಿಗೆ ಈ ಪ್ರಶಸ್ತಿ ಸಿಕ್ಕಿರುವುದು ಅವರ ಸುದೀರ್ಘ ರಂಗಪಯಣ ಹಾಗೂ ಕಲಾಸೇವೆಗೆ ಸಿಕ್ಕ ಸೂಕ್ತ ಗೌರವವಾಗಿದೆ. ಈ ಅಪರೂಪದ ಗೌರವಕ್ಕೆ ಪಾತ್ರರಾದ ಅನಂತ್ ನಾಗ್ ಅವರಿಗೆ ಹೃದಯಪೂರ್ವಕ ಅಭಿನಂದನೆಗಳು.

## ರಾಜ್ಯೋತ್ಸವಕ್ಕೆ ಅಣ್ಣಾವ್ರ ನಟನೆಯ "ಜಗಮೆಚ್ಚಿದ ಮಗ



ತಮ್ಮ ಅಮೋಘ ಅಭಿನಯದ ಮೂಲಕ ಕನ್ನಡಿಗರ ಮನ ಗೆದ್ದಿರುವ ಕನ್ನಡ ಕಂಠೀರವ ಡಾ॥ರಾಜಕುಮಾರ್ ಅಭಿನಯದ ಸೂಪರ್ ಹಿಟ್ ಚಿತ್ರ "ಜಗಮೆಚ್ಚಿದ ಮಗ" ಕಪ್ಪು ಬಿಳುಪಿನ ಈ ಚಿತ್ರ ಈಗ ಆಧುನಿಕ ತಂತ್ರಜ್ಞಾನದಿಂದ ಸಿಂಗಾರಗೊಂಡು ಕನ್ನಡ ರಾಜ್ಯೋತ್ಸವದ ಸಂದರ್ಭದಲ್ಲಿ ಕಲರ್‌ನಲ್ಲಿ ಬಿಡುಗಡೆಯಾಗಲಿದೆ. ನಿರ್ಮಾಪಕರಾಗಿ ಹಾಗೂ ವಿತರಕರಾಗಿ ನಾಲ್ಕು ದಶಕಗಳಿಂದ ಚಿತ್ರರಂಗದಲ್ಲಿರುವ ಎಸ್ ಉದಯಶಂಕರ್ "ಜಗಮೆಚ್ಚಿದ ಮಗ" ಚಿತ್ರವನ್ನು ಕಲರ್‌ನಲ್ಲಿ ತರುವ ಪ್ರಯತ್ನ ಮಾಡಿದ್ದಾರೆ. 1972ರಲ್ಲಿ ತೆರೆಕಂಡ ಭಾವ ನಾರಾಯಣ್ ಅವರು ನಿರ್ಮಾಣ ಮಾಡಿದ್ದ, ಹುಣಸೂರು ಕೃಷ್ಣ ಮೂರ್ತಿ ನಿರ್ದೇಶನದ ಈ ಚಿತ್ರದಲ್ಲಿ ಡಾ॥ ರಾಜಕುಮಾರ್, ಭಾರತಿ, ಕೆ.ಎಸ್ ಅಶ್ವತ್, ಎಂ.ವಿ.ರಾಜಮ್ಮ, ನರಸಿಂಹರಾಜು ಮುಂತಾದವರು ತಾರಾಗಣವಿದೆ.

## ಬೆಳ್ಳಿಪರದೆಯ ಮೇಲೆ ಎಂ.ಎಸ್. ಸುಬ್ಬುಲಕ್ಷ್ಮಿ ಕಥನ!

ಭಾರತ ರತ್ನ ಎಂ.ಎಸ್. ಸುಬ್ಬುಲಕ್ಷ್ಮಿ ಅಮ್ಮನವರ ಜೀವನಾಧಾರಿತ ಚಿತ್ರ (ಬಯೋಪಿಕ್) ಇದೀಗ ಅಧಿಕೃತವಾಗಿ ಘೋಷಣೆಯಾಗಿದೆ. ಭಾರತೀಯ ಶಾಸ್ತ್ರೀಯ ಸಂಗೀತದ ಪವಿತ್ರ ಕ್ಷೇತ್ರವಾದ ಚೆನ್ನೈನ 'ದಿಮ್ಯೂಸಿಕ್ ಅಕಾಡೆಮಿ'ಯಲ್ಲಿ, ಅವರ 110ನೇ ಜಯಂತಿಯ ಶುಭ ಸಂದರ್ಭದಲ್ಲಿ ಈ ಮಹತ್ವಾಕಾಂಕ್ಷೆಯ ಚಿತ್ರವನ್ನು ಪ್ರಕಟಿಸಲಾಗಿದೆ.ಅನೇಕ ವರ್ಷಗಳ ನಿರಂತರ ಶ್ರಮ, ಸೂಕ್ತ ಹಕ್ಕುಗಳು, ಸಾಹಿತ್ಯಿಕ ಮೂಲಗಳು ಹಾಗೂ ಕುಟುಂಬದ ಸಮ್ಮತಿಯನ್ನು ಪಡೆದುಕೊಂಡು, ಅತ್ಯಂತ ಗೌರವ ಮತ್ತು ಸತ್ಯಸಂಧತೆಯಿಂದ ಈ ಸಿನಿಮಾವನ್ನು ತೆರೆಗೆ ತರಲಾಗುತ್ತಿದೆ. ಈ ಮಹತ್ವದ ಚಿತ್ರದಲ್ಲಿ ಎಂ.ಎಸ್. ಸುಬ್ಬುಲಕ್ಷ್ಮಿ ಅಮ್ಮನವರ ಪಾತ್ರವನ್ನು ಇಂದಿನ ತಲೆಮಾರಿನ ಅತ್ಯಂತ ಜನಪ್ರಿಯ ನಟಿ ರಶ್ಮಿಕಾ ಮಂದಣ್ಣ ಪೋಷಿಸುತ್ತಿದ್ದಾರೆ. ಅವರ ಶಕ್ತಿಯನ್ನು ಪ್ರೇಕ್ಷಕರ ಮುಂದೆ ಅತ್ಯಂತ ರೋಚಕವಾಗಿ ತೆರೆದಿಡಲು ರಾಶ್ಮಿಕಾ ಸಜ್ಜಾಗಿದ್ದಾರೆ.





## ಮಾಲಾಶ್ರೀ – ರುಕ್ಮಿಣಿ ವಸಂತ್ 'ಮಂಗಳ ಗೌರಿ'

ಕನ್ನಡ ಚಿತ್ರರಂಗದ ಕನಸಿನ ರಾಣಿ ಮಾಲಾಶ್ರೀ ಹಾಗೂ ಬಹುಬೇಡಿಕೆಯ ನಟಿ ರುಕ್ಮಿಣಿ ವಸಂತ್ ಒಟ್ಟಿಗೆ ತೆರೆ ಹಂಚಿಕೊಳ್ಳಲು ಸಜ್ಜಾಗಿದ್ದಾರೆ. ಸ್ಯಾಂಡಲ್‌ವುಡ್‌ನ ಎರಡು ತಲೆಮಾರಿನ ಖ್ಯಾತ ನಟಿಯರನ್ನು ಒಂದೇ ಫ್ರೇಮ್‌ನಲ್ಲಿ ಒಗ್ಗೂಡಿಸಿರುವ 'ಮಂಗಳ ಗೌರಿ' ಎಂಬ ಚಿತ್ರ ಅಧಿಕೃತವಾಗಿ ಘೋಷಣೆಯಾಗಿದ್ದು, ಸದ್ಯ ಭರದಿಂದ ಚಿತ್ರೀಕರಣ ಸಾಗುತ್ತಿದೆ. ರಾಹುಲ್ ಪಿಕೆ ನಿರ್ದೇಶನ ಮಾಡುತ್ತಿರುವ ಈ ಚಿತ್ರವನ್ನು ಕಂಟೆಂಟ್ ಆಧಾರಿತ ಹಾಗೂ ಅದ್ದೂರಿ ಚಿತ್ರಗಳಿಗೆ ಹೆಸರಾದ ಎರಡು ಪ್ರತಿಷ್ಠಿತ ಸಂಸ್ಥೆಗಳಾದ 'ಕೆವಿಎನ್ ಪ್ರೊಡಕ್ಷನ್ಸ್' ಮತ್ತು 'ದಾಕ್ಷಾಯಣಿ ಟಾಕೀಸ್' ಜಂಟಿಯಾಗಿ ನಿರ್ಮಿಸುತ್ತಿವೆ. ಈ ಚಿತ್ರದಲ್ಲಿ ಮಾಲಾಶ್ರೀ ಅವರು ಇದುವರೆಗೂ ಕಂಡಿರದ ಹೊಚ್ಚ ಹೊಸ ಅವತಾರದಲ್ಲಿ ಪ್ರೇಕ್ಷಕರ ಎದುರು ಬರಲಿದ್ದು, ಸಹಜ ಅಭಿನಯದ ಮೂಲಕ ಸದ್ದು ಮಾಡುತ್ತಿರುವ ರುಕ್ಮಿಣಿ ವಸಂತ್ ಜೊತೆಯಾಗಿ ಮಿಂಚಲಿದ್ದಾರೆ.











KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021